# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 129 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 02-12-2023 ಶನಿವಾರ | ಪುಟ: 4 | ಬೆಲೆ : ರೂ.2-00
Volume - 01 Issue - 129 | Title- Code: KARKAN 28269 | Chitradurga | Date: 02-12-2023 Saturday | Page: 4 | Price: Rs. 2-00



ಒಳಪುಟದ ಸುದ್ದಿಗಳು
ಉತ್ತಮ ಮಳೆ ಬೆಳೆಯಾಗಲಿ ಎಂದು ದೇವರಲ್ಲಿ ಪ್ರಾರ್ಥಿಸಿದ್ದೇನೆ: ಟಿ.ರಘುಮೂರ್ತಿ 2
ರೈತರ ಪರಿಹಾರದ ಧನ ಸಾಲಕ್ಕೆ ಜಮಾ ಮಾಡುವ ಬ್ಯಾಂಕ್ ವಿರುದ್ಧ ಆಕ್ರೋಶ 3
ಚಿತ್ರದುರ್ಗ, ದಾವಣಗೆರೆ ಜಿಲ್ಲೆಗಳಲ್ಲಿ ಮೆಕ್ಕೆಜೋಳ ಖರೀದಿ ಕೇಂದ್ರ 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

## ಜಿಲ್ಲಾ ಮಟ್ಟದ ಯುವಜನೋತ್ಸವ ಸ್ಪರ್ಧೆ 7 ರಂದು


■ ಚಿತ್ರದುರ್ಗ

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ವತಿಯಿಂದ ಡಿಸೆಂಬರ್ 7 ರಂದು ಬೆಳಿಗ್ಗೆ 10.30ಕ್ಕೆ ಚಿತ್ರದುರ್ಗ ನಗರದ ಜಿಲ್ಲಾ ಕ್ರೀಡಾಂಗಣ ಸಭಾಂಗಣದಲ್ಲಿ 2023-24ನೇ ಸಾಲಿನ ಜಿಲ್ಲಾ ಮಟ್ಟದ ಯುವಜನೋತ್ಸವದ ಆಯ್ಕೆ ಸ್ಪರ್ಧೆಗಳನ್ನು ಏರ್ಪಡಿಸಲಾಗಿದೆ. ಕನ್ನಡ, ಇಂಗ್ಲೀಷ್ ಹಾಗೂ ಹಿಂದಿ ಭಾಷೆಯಲ್ಲಿ ಜಾನಪದ ನೃತ್ಯ ಹಾಗೂ ಗೀತೆ ಗಾಯನ ಸ್ಪರ್ಧೆಯಲ್ಲಿ ವೈಯಕ್ತಿಕ ಹಾಗೂ 10 ಜನರ ತಂಡವಾಗಿ ಪಾಲ್ಗೊಳ್ಳಬಹುದು. ವೈಯಕ್ತಿಕ ಸ್ಪರ್ಧೆಗೆ 7 ನಿಮಿಷ ಹಾಗು ಗುಂಪು ಸ್ಪರ್ಧೆಗೆ 15 ನಿಮಿಷ ಕಾಲವಕಾಶ ನೀಡಲಾಗುವುದು. ಇದರೊಂದಿಗೆ ನಿಯಮಗಳಿಗೆ ಒಳಪಟ್ಟು ಕಥೆ ಬರವಣಿಗೆ, ಪೋಸ್ಟರ್ ಮೇಕಿಂಗ್, ಭಾಷಣ ಹಾಗೂ ಛಾಯಚಿತ್ರ ಸ್ಪರ್ಧೆಗಳು ಜರುಗಲಿವೆ. ಚಿತ್ರದುರ್ಗ ಜಿಲ್ಲೆಯ 15 ರಿಂದ 29 ವರ್ಷದ ಒಳಗಿನವರು ಮಾತ್ರ ಪಾಲ್ಗೊಳ್ಳು ಅವಕಾಶವಿದ್ದು, ಕಡ್ಡಾಯವಾಗಿ ಎಸ್‌ಎಸ್‌ಎಲ್‌ಸಿ ಅಂಕಪಟ್ಟಿ ಅಥವಾ ಇತರೆ ಜನ್ಮದಿನಾಂಕ ದೃಢೀಕರಣ ಪತ್ರ ಹಾಜರು ಪಡಿಸಬೇಕು. ಸ್ಪರ್ಧೆಗಳು ಬೆಳಗ್ಗೆ 10.30 ರಿಂದ ಪ್ರಾರಂಭವಾಗಲಿರುವುದರಿಂದ 10 ಗಂಟೆಯ ಒಳಗಾಗಿ ಸ್ಪರ್ಧಾಳುಗಳೂ ವರದಿ ಮಾಡಿಕೊಳ್ಳಬೇಕು. ಜಿಲ್ಲಾ ಮಟ್ಟದಲ್ಲಿ ವಿಜೇತರಾದವರು ರಾಜ್ಯ ಮಟ್ಟದಲ್ಲಿ, ರಾಜ್ಯ ಮಟ್ಟದಲ್ಲಿ ಭಾಗವಹಿಸಬಹುದು.

# ಸೇವೆ ಕಾಯಂಗೆ ಕಾರ್ಮಿಕರ ಆಗ್ರಹ

» ಚಿತ್ರದುರ್ಗ

ಕರ್ನಾಟಕ ರಾಜ್ಯ ನಗರ ಪಾಲಿಕೆ, ನಗರಸಭೆ, ಪುರಸಭೆ, ಪಟ್ಟಣ ಪಂಚಾಯಿತಿಗಳ ವ್ಯಾಪ್ತಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ನೇರ ಪಾವತಿ ಪೌರಕಾರ್ಮಿಕರು ಹಾಗೂ ಲೋಡರ್ಸ್ ಆಟೋ ಮತ್ತು ಟಿಪ್ಪರ್ ವಾಹನ ಚಾಲಕರು ಮತ್ತು ಸಹಾಯಕರನ್ನು ಒಂದೇ ಬಾರಿಗೆ ಖಾಯಂ ಮಾಡಲು ಆಗ್ರಹಿಸಿ ಇಂದು ಜಿಲ್ಲಾಧಿಕಾರಿಗಳ ಕಚೇರಿ ಮುಂದೆ ಕರ್ನಾಟಕ ರಾಜ್ಯ ನಗರ ಪಾಲಿಕೆ, ನಗರಸಭೆ, ಪುರಸಭೆ, ಪೌರಕಾರ್ಮಿಕರ ಮಹಾಸಂಘ ಸಫಾಯಿ ಕರ್ಮಚಾರಿ ಕಾವಲು ಸಮಿತಿ-ಕರ್ನಾಟಕ ಹಾಗೂ ಚಿತ್ರದುರ್ಗ ಜಿಲ್ಲಾ ಪೌರಕಾರ್ಮಿಕ ಸಂಘ ಧರಣಿಯನ್ನು ನಡೆಸಿತು.



2022 ಜುಲೈ 01 ರಂದು ಅಂದಿನ ಮುಖ್ಯಮಂತ್ರಿಗಳಾದ ಬಸವರಾಜ್ ಬೊಮ್ಮಾಯಿ ಪೌರಕಾರ್ಮಿಕ ಮುಖಂಡರೊಂದಿಗೆ ಚರ್ಚೆ ನಡೆಸಿ ಪೌರಕಾರ್ಮಿಕರ 30 ವರ್ಷಗಳ ಈ ಜ್ವಾಲಂತ ಸಮಸ್ಯೆಗೆ ನಾನು ಬಗೆಹರಿಸುತ್ತೇನೆ. ಎಲ್ಲಾ ನೇರಪಾವತಿ ಪೌರಕಾರ್ಮಿಕರನ್ನು ಖಾಯಂ ಮಾಡಲಾಗುವುದು ಮತ್ತು ಹೊರ ಗುತ್ತಿಗೆ ಲೋಡರ್ಸ್, ಒಳಚರಂಡಿ ಸ್ವಚ್ಚತಾ ಕಾರ್ಮಿಕರು ಮತ್ತು ಕಸದ ವಾಹನ ಚಾಲಕರನ್ನು ಹಾಗೂ ಸಹಾಯಕರನ್ನು ಗುತ್ತಿಗೆ ಪದ್ಧತಿಯಿಂದ ಮುಕ್ತಿಗೊಳಿಸಿ ನೇರ ಪಾವತಿ ಸೇರಿಸಲಾಗುವುದು ಎಂದು ಬರವಣಿಗೆಯಲ್ಲಿ ನೀಡಿದ್ದಾರೆ. 2018ರಲ್ಲಿ ಸಿದ್ದರಾಮಯ್ಯ ಮುಖ್ಯಮಂತ್ರಿಗಳಾಗಿದ್ದಾಗ ಸಚಿವ ಸಂಪುಟ ಸಭೆಯಲ್ಲಿ ಚರ್ಚಿಸಿ ಎಲ್ಲಾ ಗುತ್ತಿಗೆ ಪೌರಕಾರ್ಮಿಕರು ಮತ್ತು ಇತರೇ ಸ್ವಚ್ಚತಾ ಕಾರ್ಮಿಕರನ್ನು ಖಾಯಂ ಮಾಡಲು ನಿರ್ಧರಿಸಿದ್ದರು.

2022ರ ವಿಧಾನಸಭಾ ಚುನಾವಣೆಯ ಕಾಂಗ್ರೆಸ್ ಪಕ್ಷ ತನ್ನ ಚುನಾವಣಾ ಪ್ರಣಾಳಿಕೆಯಲ್ಲಿಯೂ ಸಹ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ಕೂಡಲೇ 25000 ಪೌರಕಾರ್ಮಿಕರನ್ನು ಖಾಯಂ ಮಾಡಲಾಗುವುದು ಎಂದು ಘೋಷಿಸಿತ್ತು. ಆದರೂ ಈ ಯಾವ ಘೋಷಣೆಗಳು, ತೀರ್ಮಾನಗಳು ಪೂರ್ಣ ಪ್ರಮಾಣದಲ್ಲಿ ಅನುಷ್ಠಾನ ಮಾಡುವಲ್ಲಿ ರಾಜ್ಯ ಸರ್ಕಾರ ಮತ್ತು ಅಧಿಕಾರಿಗಳು ಕಾಳಜಿವಹಿಸಿಲ್ಲ. ಆದ್ದರಿಂದ ಪೌರಕಾರ್ಮಿಕ ಮಹಾಸಂಘ ಹಾಗೂ ರಾಜ್ಯದ ವಿವಿದ ಪೌರಕಾರ್ಮಿಕ ಸಂಘಟನೆಗಳ ಜಂಟಿ ಆಶ್ರಯದಲ್ಲಿ ನೇರಪಾವತಿ ಹಾಗೂ ಗುತ್ತಿಗೆ ಪೌರಕಾರ್ಮಿಕರು, ಲೋಡರ್ಲ್ಸ್, ಕ್ಲಿನರ್ಸ್, ಕಸದ ವಾಹನ ಚಾಲಕರು ಹಾಗೂ ಈ ಘನ ತ್ಯಾಜ್ಯ ನಿರ್ವಾಹಣ ಘಟಕಗಳ ಸ್ವಚ್ಚತಗಾರರು ಮತ್ತು ಸಹಾಯಕರನ್ನು ಕೂಡಲೇ ಖಾಯಂಗೊಳಿಸಲು ಆಗ್ರಹಿಸಿ ಜಿಲ್ಲಾಧಿಕಾರಿಗಳ ಕಚೇರಿ ಮುಂದೆ ಸಾಂಕೇತಿಕ ಧರಣಿ ನಡೆಸಲಾಗುತ್ತಿದೆ.

ರಾಜ್ಯ ಸರ್ಕಾರ ಪ್ರಸಕ್ತ ಬೆಳಗಾವಿ ಅಧಿವೇಶನದಲ್ಲಿ ಈ ಕುರಿತು ಚರ್ಚಿಸಿ ಎಲ್ಲಾರನ್ನು ಖಾಯಂ ಮಾಡುವ ನಿರ್ಣಯ ಹೊರಡಿಸಬೇಕು, ತಪ್ಪಿದಲ್ಲಿ ರಾಜ್ಯದಾದ್ಯಂತ ಸ್ವಚ್ಚತಾ ಕಾರ್ಯ ನಿಲ್ಲಿಸಿ ಅನಿರ್ಧಿಷ್ಟಾವಧಿ ಮುಷ್ಕರ ನಡೆಸಲಾಗುವುದು ಎಂದು ಸರ್ಕಾರಕ್ಕೆ ಎಚ್ಚರಿಕೆ ನೀಡಲಾಯಿತು.

ರಾಜ್ಯದ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಎಲ್ಲಾ ನೇರ ಪಾವತಿ ಪೌರಕಾರ್ಮಿಕರು, ಮೇಲ್ವಿಚಾರಕರು ಮತ್ತು ಕಸ ಸಾಗಿಸುವ ವಾಹನ ಚಾಲಕರು, ಲೋಡರ್ಸ್, ಸಹಾಯಕರನ್ನು ಒಂದೇ ಬಾರಿಗೆ ಖಾಯಂ ಮಾಡಬೇಕು. ಎಲ್ಲಾರಿಗೂ ವಸತಿ ನಿರ್ಮಾಣಕ್ಕಾಗಿ ವಸತಿ ನಿವೇಶನ ನೀಡಬೇಕು ಆಯಾಯಾ ನಗರ ವ್ಯಾಪ್ತಿಯ ಜನಸಂಖ್ಯೆಗನುಗುಣವಾಗಿ 500 ಜನರಿಗೆ ಒಬ್ಬ ಪೌರಕಾರ್ಮಿಕ ಎಂಬು ಅನುಪಾತದಲ್ಲಿ ಪೌರಕಾರ್ಮಿಕರನ್ನು ನೇಮಿಸಿಕೊಳ್ಳಬೇಕು.

ನೇರಪಾವತಿ ಆಧಾರದಲ್ಲಿ ಸ್ವಚ್ಚತಾ ಕೆಲಸ ಮಾಡುವ ಅವಧಿಯಲ್ಲಿ ಕಾರಣಾಂತರಗಳಿಂದ ಮರಣ ಹೊಂದಿರುವ ಪೌರಕಾರ್ಮಿಕರ ಅವಲಂಬಿತರಿಗೆ ಉದ್ಯೋಗ ಮತ್ತು ಪುನರ್ವಸತಿ ಒದಗಿಸಬೇಕು. ಇತ್ತೀಚೆಗೆ ಪೌರಕಾರ್ಮಿಕ ಹುದ್ದೆಗಳನ್ನು ಸೂಪರ್ ನ್ಯೂಮರಿ ಹುದ್ದೆಗಳಾಗಿ ತುಂಬಲು ಪ್ರಯತ್ನಿಸುತ್ತಿರುವುದು ಗಮನಿಸಿದ್ದೇವೆ. ಈ ರೀತಿಯ ನೇಮಕಾತಿಗಳು ಪೌರಕಾರ್ಮಿಕರ ಪಾಲಿಗೆ ಅನ್ಯಾಯ ಮತ್ತು ಅಕ್ರಮ. ಆದ್ದರಿಂದ ಈ ಕೂಡಲೇ ಈ ಪ್ರಕ್ರಿಯೆಯನ್ನು ಕೈಬಿಡಬೇಕು. ಎಲ್ಲಾ ಸ್ವಚ್ಚತ ಕಾರ್ಮಿಕರನ್ನು ಒಂದೇ ಬಾರಿಗೆ ಖಾಯಂ ಮಾಡಬೇಕು.

ರಾಜ್ಯ ಸರ್ಕಾರ ಜಾರಿ ಮಾಡಿರುವ ಸಂಕಷ್ಟ ಭತ್ಯೆಯನ್ನು ಎಲ್ಲಾ ಸ್ವಚ್ಚತಾ ಕಾರ್ಮಿಕರಾದ ನೇರನೇಮಕಾತಿ ಹಾಗೂ ಗುತ್ತಿಗೆ ಪೌರಕಾರ್ಮಿಕರು ಲೋಡರ್ಸ್, ಕ್ಲೀನರ್ಸ್, ಕಸದ ವಾಹನ ಚಾಲಕರು ಹಾಗೂ ಘನ ತ್ಯಾಜ್ಯ ನಿರ್ವಹಣಾ ಘಟಕಗಳ ಸ್ವಚ್ಚತಗಾರರು ಮತ್ತು ಸಹಾಯಕರಿಗೂ ವಿಸ್ತರಿಸಬೇಕು ಎಂದು ಆಗ್ರಹಿಸಲಾಯಿತು. ಈ ಧರಣಿಯಲ್ಲಿ ಜಿಲ್ಲಾಧ್ಯಕ್ಷರಾದ ದುರುಗೇಶ್, ಉಪಾಧ್ಯಕ್ಷರಾದ ಎಸ್. ಜಗದೀಶ್, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಕೆ.ರಾಜಣ್ಣ ಸಹ ಕಾರ್ಯದರ್ಶಿ ಮಂಜಣ್ಣ ಟಿ. ವಾಹನ ಚಾಲಕರ ಸಂಘದ ತಾಲ್ಲೂಕು ಅಧ್ಯಕ್ಷ ನವೀನ್ ಕುಮಾರ್ ರಂಗಪ್ಪ ಸೇರಿದಂತೆ ಇತರರು ಭಾಗವಹಿಸಿದ್ದರು.

# ಆಂಧ್ರ ಮೊದಲ ಭಾಷವಾರು ರಾಜ್ಯ: ತಿಪ್ಪೇಸ್ವಾಮಿ

■ ಚಿತ್ರದುರ್ಗ

ಭಾಷಾವಾರು ಪ್ರಾಂತ್ಯಗಳ ಹೋರಾಟಕ್ಕೆ ಮಣಿದು ನೆಹರು ನೇತೃತ್ವದ ಕೇಂದ್ರ ಸರ್ಕಾರ ಆಂಧ್ರಪ್ರದೇಶವನ್ನು ಘೋಷಿಸಿತು ಎಂದು ಉಪನ್ಯಾಸಕ ಕೆರೆಯಾಗಳಹಳ್ಳಿ ತಿಪ್ಪೇಸ್ವಾಮಿ ತಿಳಿಸಿದರು. ನಗರದ ಸಿ.ಎಂ.ಸಿ ಬಡಾವಣೆಯ ಅಶೋಕ ಸರ್ಕಲ್‌ನಲ್ಲಿ ಗೆಳೆಯರ ಬಳಗದಿಂದ ಆಯೋಜಿಸಿದ್ದ ಕನ್ನಡ ರಾಜ್ಯೋತ್ಸವದ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಸ್ವಾತಂತ್ರ್ಯ ಬಂದ ಮೇಲೆ ಭಾಷವಾರು ಪ್ರಾಂತ್ಯಗಳಿಗೆ ಹೋರಾಟಗಳು ನಡೆಯುವ ಸಂದರ್ಭದಲ್ಲಿ ಕೇಂದ್ರ ಸರ್ಕಾರ ಫಜಲ್ ಹಾಲಿ ಕಮಿಟಿಯನ್ನು ರಚಿಸಿತ್ತು. ಅಷ್ಟೊತ್ತಿಗಾಗಲೇ ಆಂಧ್ರಪ್ರದೇಶದಲ್ಲಿ ಕೊಟ್ಟಿ ಶ್ರೀರಾಮುಲು ರವರ ಹೋರಾಟ ಪ್ರಬಲವಾಗಿ ನಡೆಯುತ್ತಿತ್ತು ಎಂದು ತಿಳಿಸಿದರು. ಕೊಟ್ಟಿ ಶ್ರೀರಾಮುಲು ಉಪವಾಸ ಸತ್ಯಾಗ್ರಹದಲ್ಲಿ ನಿರತರಾಗಿದ್ದಾಗಲೇ ಮರಣ ಹೊಂದುತ್ತಾರೆ. ಹಾಗಾಗಿ ನೆಹರು ಅವರು ಆಂಧ್ರಪ್ರದೇಶವನ್ನು ಮೊದಲಿಗೆ ಘೋಷಿಸಿದ್ದಾರೆ. ಇದಾದ ನಂತರ ದೇಶದ ಎಲ್ಲಾ ಭಾಗದಲ್ಲಿ ನಡೆಯುವ ಹೋರಾಟಗಳನ್ನು ಗಮನಿಸಿ 1956 ರಲ್ಲಿ ಮೈಸೂರು ರಾಜ್ಯವನ್ನು ಘೋಷಿಸುತ್ತಾರೆ. ನಂತರ ಧಾರವಾಡದ ವಿದ್ಯಾವರ್ತಕ ಸಂಘದ ನೇತೃತ್ವದಲ್ಲಿ ಕವಿಗಳು, ಸಾಹಿತಿಗಳು, ಕರ್ನಾಟಕ ಏಕೀಕರಣಕ್ಕಾಗಿ ಹೋರಾಟ ನಡೆಸುತ್ತಾರೆ. ದೇವರಾಜ ಅರಸು 1973 ರಲ್ಲಿ ಕರ್ನಾಟಕ ಎಂದು ನಾಮಕರಣ ಮಾಡಿದರು ಎಂದು ಹೇಳಿದರು. ಕನ್ನಡ ಭಾಷೆ ಉದ್ಯೋಗದ ಭಾಷೆಯಾಗಬೇಕು, ಅನ್ನದ ಭಾಷೆಯಾಗಬೇಕು, ರಾಜ್ಯದಲ್ಲಿ ಕನ್ನಡ ಮಾಧ್ಯಮವಾಗಿ ಉಳಿಯಬೇಕು, ಕನ್ನಡವನ್ನ ಸರ್ಕಾರ ಉಳಿಸಬೇಕೆ ವಿನಃ ಅಳಿಸಬಾರದು ಎಂದು ಹೇಳಿದರು. ಪತ್ರಕರ್ತ ಅಹೋಬಳಪತಿ ಮಾತನಾಡಿ, ಪ್ರಾದೇಶಿಕವಾರು ಅಸಮಾನತೆಗಳನ್ನು ಹೋಗಲಾಡಿಸಬೇಕು. ಪ್ರಾತಿನಿತ್ಯ ಎಲ್ಲಾ ಕಡೆ ಎಲ್ಲರಿಗೂ ಸಮಾನವಾಗಿ ದೊರೆಯುವಂತಹ ವಾತಾವರಣ ನಿರ್ಮಾಣವಾಗಲಿ, ಕನ್ನಡ ಉಳಿವಿಗೆ ಎಲ್ಲರ ಗಟ್ಟಿ ಧ್ವನಿ ಅಗತ್ಯ ಎಂದು ತಿಳಿಸಿದರು. ವೇದಿಕೆಯಲ್ಲಿ 103 ವರ್ಷದ ಬಂಡಾಯಸ್ವಾಮಿ, ಚಿನ್ಮಯನಂದ, ನಿಂಗಪ್ಪ, ಶ್ರೀನಿವಾಸ್, ಶಿವಲಿಂಗಪ್ಪ, ರಂಗಪ್ಪ, ನಾಗರಾಜ್, ಗಣೇಶಯ್ಯ, ರವೀಶ್ ರವರನ್ನು ಸನ್ಮಾನಿಸಲಾಯಿತು. ವೇದಿಕೆಯಲ್ಲಿ ಕಾರ್ಯನಿರತ ಪತ್ರಕರ್ತ ಸಂಘದ ಅಧ್ಯಕ್ಷ ದಿನೇಶ್ ಗೌಡಗೆರೆ, ಗೆಳೆಯರ ಬಳಗದ ಪತ್ರಕರ್ತ ಗೌನಹಳ್ಳಿ ಗೋವಿಂದಪ್ಪ, ರಾಜು, ವೀರೇಂದ್ರಕುಮಾರ್, ಸಿ.ಎನ್. ಕುಮಾರ್, ಹನುಮಂತಪ್ಪ, ವಕೀಲರಾದ ಅಶ್ವತ್‌ನಾಯಕ, ಶಿವುಯಾದವ್, ತಿಮ್ಮಣ್ಣ, ಶರಣಪ್ಪ, ಮಲ್ಲಿಕಾರ್ಜುನ್, ಕ್ರಷರ್ ಮಾಲೀಕರಾದ ಗುರು, ಉಪನ್ಯಾಸಕ ಮಲ್ಲೇಶ್, ಖಾನ್, ರಾಜ್‌ಕುಮಾರ್ ಮುಖಂಡರಾದ ಮೈಲಾರಪ್ಪ, ರಾಘವೇಂದ್ರ, ಮಂಜುನಾಥ್, ನಾಗಭೂಷಣ್, ವ್ಯವಸ್ಥಾಪಕರಾದ ಚನ್ನಬಸಪ್ಪ, ಬಡಪ್ಪ, ಪೊಲೀಸ್ ಮಹಾದೇವ, ಸಬ್‌ಇನ್ಸ್‌ಪೆಕ್ಟರ್ ಯಶೋಧಮ್ಮ, ಮಂಜುನಾಥ್, ಸಿ.ಎನ್.ಮೋಹನ, ಕಂಪ್ಯೂಟರ್ ತಿಪ್ಪೇಸ್ವಾಮಿ, ಶಿವರುದ್ರಪ್ಪ, ಹನುಮಂತಪ್ಪ, ಯಶವಂತ್, ಕಾಂಟ್ರಾಕ್ಟ್ ರಾಜಣ್ಣ ಸೇರಿದಂತೆ ಭಾಗವಹಿಸಿದ್ದರು.










## ಫಾಸ್ಟ್ ನ್ಯೂಸ್

### ಅಂತರಾಷ್ಟ್ರೀಯ ಯೋಗಪಟು ಸ್ವಪ್ನಾಗೆ ರಾಜ್ಯೋತ್ಸವ ಪ್ರಶಸ್ತಿ



ದಾವಣಗೆರೆ ಮಹಾನಗರ ಪಾಲಿಕೆ ಕನ್ನಡಪರ ಸಂಘ ಸಂಸ್ಥೆಗಳು ಮತ್ತು ಪತ್ರಕರ್ತರ ಸಂಯುಕ್ತ ಆಶ್ರಯದಲ್ಲಿ 68ನೇ ಕನ್ನಡ ರಾಜ್ಯೋತ್ಸವ ಸಮಾರಂಭವನ್ನು 25.26.27.ಮೂರು ದಿನಗಳ ಕಾಲ ಅದ್ದೂರಿಯಾಗಿ ಜರುಗಿತು .ಪ್ರತಿದಿನ ಸಂಸ್ಕೃತ ಕಾರ್ಯಕ್ರಮಗಳು ಹಾಗೂ ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ಸನ್ಮಾನಿತರಿಗೆ ಸನ್ಮಾನ ಜರುಗಿದವು. 25 ರಂದು ವಿವಿಧ ಕ್ಷೇತ್ರದಲ್ಲಿ ಸಾಧನೆಗೈದ ಸನ್ಮಾನ ಕಾರ್ಯಕ್ರಮದಲ್ಲಿ ಗೌರವ ಡಾಕ್ಟರೇಟ್ ಪುರಸ್ಕೃತರಾದ ಹಾಗೂ ಅಂತರಾಷ್ಟ್ರೀಯ ಯೋಗ ಪಟು ಶ್ರೀಮತಿ ಸ್ವಪ್ನಾ ಬಿ. ಇವರಿಗೆ ದಾವಣಗೆರೆ ಮಹಾನಗರ ಪಾಲಿಕೆ ವತಿಯಿಂದ ಕೊಡಮಾಡುವ ಕನ್ನಡ ರಾಜ್ಯೋತ್ಸವ ಪ್ರಶಸ್ತಿ ಸನ್ಮಾನವನ್ನು ದಕ್ಷಿಣ ಕ್ಷೇತ್ರದ ಶಾಸಕರಾದ ಡಾ, ಶಾಮನೂರು ಶಿವಶಂಕಪ್ಪನವರು ಸನ್ಮಾನಿಸಿ, ಗೌರವಿಸಿದರು.

### ಇಷ್ಟಾರ್ಥ ಸಿದ್ಧಿಗಾಗಿ ಹೆಸರನ್ನ ನೋಂದಾಯಿಸಲು ಹುಲಿರಂಗನಾಥ್ ಮನವಿ



» **ಹಿರಿಯೂರು**

ಇದೇ ಡಿಸೆಂಬರ್ 24 ರಂದು ಬೆಳಿಗ್ಗೆ 4-30 ರಿಂದ ಸಂಜೆ 11-00 ಗಂಟೆ ತನಕ "ಇಷ್ಟಾರ್ಥ ಸಿದ್ಧಿಗಾಗಿ ಕುಂಚಿಟಿಗರ ಅಷ್ಟದೈವ ಯಾತ್ರೆ" ಒಂದು ದಿನದ ಭಾವೈಕ್ಯತಾ ಪ್ರವಾಸ ಏರ್ಪಡಿಸಲಾಗಿದೆ ಎಂಬುದಾಗಿ ತಾಲ್ಲೂಕು ಕುಂಚಿಟಿಗರ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷರಾದ ಹುಲಿರಂಗನಾಥ್ ತಿಳಿಸಿದ್ದಾರೆ.ನಗರದ ಪ್ರವಾಸಿ ಮಂದಿರದಲ್ಲಿ ತಾಲ್ಲೂಕು ಕುಂಚಿಟಿಗರ ಕ್ಷೇಮಾಭಿವೃದ್ಧಿ ಸಂಘ ಮತ್ತು ಕರ್ನಾಟಕ ರಾಜ್ಯ ಕುಂಚಿಟಿಗರ ಒಕ್ಕೂಟದ ವತಿಯಿಂದ ಆಂಧ್ರಪ್ರದೇಶದ ಗಡಿನಾಡು ಕುಂಚಿಟಿಗರ ಮನೆದೇವರುಗಳ ದರ್ಶನಪ್ರವಾಸದ ಪೂರ್ವಭಾವಿ ಸಭೆಯಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.ಈ ಪ್ರವಾಸ ಸಂದರ್ಭದಲ್ಲಿ ಮರಡಿಗುಡ್ಡ ರಂಗನಾಥಸ್ವಾಮಿ. ಮೂಗನಹಳ್ಳಿ ಅಮ್ಮಾಜಿ ಕಾವಲೇಶ್ವರಿ ಮತ್ತು ಮಾಗೋಡು ಕಂಬದರಂಗನಾಥಸ್ವಾಮಿ, ಶಿವನಗೆರೆ ಹೊನ್ನೇಶ್ವರಸ್ವಾಮಿ. ವಿರಾಪುರಕರಿಯಮ್ಮ, ಏಳುಮಂದಕ್ಕ, ತಾಡಿನಾಗಮ್ಮ, ಕೊಂಡವಾಡಿ ಚೌಡೇಶ್ವರಿ, ವಡ್ಡಗೆರೆ ವೀರನಾಗಮ್ಮ, ಎಲೆರಾಂಪುರ ನರಸಿಂಹಸ್ವಾಮಿ, ದೇವರುಗಳ ದೇವಸ್ಥಾನ ದರ್ಶನ ಮಾಡಿಸಲಾಗುವುದು.ಈ ಪ್ರವಾಸಕ್ಕೆ ಬರುವ ಆಸಕ್ತ ಕುಂಚಿಟಿಗ ಕುಲಬಾಂಧವರು ಡಿಸೆಂಬರ್ 10 ರೊಳಗೆ ರೂ 600 ಪಾವತಿಸಿ, ನಮ್ಮ ಕಸವನಹಳ್ಳಿ ರಮೇಶ್ :9945941880, ಕ್ಯಾದಿಗುಂಟೆ ಜಯರಾಮಯ್ಯ :7406661710, ವಿ.ಕುಬೇರಪ್ಪ :9972199458, ಕಾತ್ರಿಕೇನಹಳ್ಳಿ ಮಂಜುನಾಥ್ :9980835704 ಕುಂಚಿಟಿಗ ಮುಖಂಡರನ್ನು ಸಂಪರ್ಕಿಸಿ ಹೆಸರು ನೋಂದಾಯಿಸುವಂತೆ ಅವರು ಮನವಿ ಮಾಡಿದರು. ಈ ಸಭೆಯಲ್ಲಿ ಕುಂಚಿಟಿಗ ಕುಲಶಾಸ್ತ್ರ ಅಧ್ಯಯನಕಾರ ಎಸ್.ವಿ.ರಂಗನಾಥ್, ಉಪಾಧ್ಯಕ್ಷ ಮಲ್ಲಪ್ಪನಹಳ್ಳಿ ಜೋಗೇಶ್, ದೇವರಕೊಟ್ಟ ರಂಗಸ್ವಾಮಿ, ಹುಚ್ಚವನಹಳ್ಳಿ ಅವಿನಾಶ್, ಪೆಪ್ಸಿಹನುಮಂತರಾಯ, ದಿಂಡಾವರ ಚಂದ್ರಗಿರಿ, ಹುಲುಗಲಕುಂಟೆ ಶಶಿಕಲಾ, ಕೆ.ಕೆ. ಹಟ್ಟಿ ಜಯಪ್ರಕಾಶ್ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

### ಡಿ.2 ರಂದು ಲಿಂಗತ್ವ ದೌರ್ಜನ್ಯ ಅಭಿಯಾನದ ಕುರಿತು ಅರಿವು ಜಾಥಾ

» **ದಾವಣಗೆರೆ**

ಎನ್.ಆರ್.ಎಲ್.ಎಂ ಯೋಜನೆಯಡಿ ರಚಿಸಲ್ಪಟ್ಟ ಸ್ವಸಹಾಯ ಸಂಘದ ಮಹಿಳೆಯರಿಂದ ಲಿಂಗತ್ವ ದೌರ್ಜನ್ಯ ಅಭಿಯಾನದ ಕುರಿತು ಡಿಸೆಂಬರ್ 2 ರಂದು ಬೆಳಿಗ್ಗೆ 10 ಗಂಟೆಗೆ ನಗರದ ಜಯದೇವ ವೃತ್ತದಿಂದ ಗುಂಡಿ ಸರ್ಕಲ್‌ವರೆಗೆ ಲಿಂಗತ್ವ ದೌರ್ಜನ್ಯ ಅಭಿಯಾನದ ಕುರಿತ ಅರಿವು ಜಾಥಾ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದು ಜಿಪಂ ಸಿಇಓ ಸುರೇಶ್.ಬಿ.ಇಟ್ನಾಳ್ ತಿಳಿಸಿದ್ದಾರೆ.

### ಕೆಡಿಪಿ ಸಭೆಯಲ್ಲಿ ಜಿ.ಪಂ ಆಡಳಿತಾಧಿಕಾರಿ ಅಮ್ಲಾನ್ ಆದಿತ್ಯ ಬಿಸ್ವಾಸ್ ಸೂಚನೆ

# ಜಲಜೀವನ್: ಸಮರ್ಪಕ ಅನುಷ್ಠಾನ ಮಾಡಿ

» **ಚಿತ್ರದುರ್ಗ**

ಜಿಲ್ಲೆಯಲ್ಲಿ ಜಲಜೀವನ್ ಮಿಷನ್ ಯೋಜನೆಯನ್ನು ಸಮರ್ಪಕವಾಗಿ ಅನುಷ್ಠಾನ ಮಾಡುವ ಮೂಲಕ ಕುಡಿಯುವ ನೀರಿನ ಯೋಜನೆಗೆ ಹೆಚ್ಚಿನ ಆದ್ಯತೆ ನೀಡಬೇಕು ಎಂದು ಬೆಂಗಳೂರು ವಿಭಾಗದ ಪ್ರಾದೇಶಿಕ ಆಯುಕ್ತರು ಹಾಗೂ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಮತ್ತು ಜಿಲ್ಲಾ ಪಂಚಾಯಿತಿ ಆಡಳಿತಾಧಿಕಾರಿ ಅಮ್ಲಾನ್ ಆದಿತ್ಯ ಬಿಸ್ವಾಸ್ ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಗರದ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಗುರುವಾರ ಹಮ್ಮಿಕೊಂಡಿದ್ದ ಜಿಲ್ಲಾ ಪಂಚಾಯಿತಿ ಮಾಸಿಕ ಕೆಡಿಪಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಯಾವುದೇ ಅಧಿಕಾರಿಗಳು ಸರ್ಕಾರಿ ಸೌಲಭ್ಯವನ್ನು ಅರ್ಹರಿಗೆ ತಲುಪಿಸುವಲ್ಲಿ ನಿಷ್ಕಾಳಜಿ, ನಿರ್ಲಕ್ಷ್ಯ ತೋರುವುದನ್ನು ಸಹಿಸುವುದಿಲ್ಲ. ಅಧಿಕಾರಿಗಳಲ್ಲಿ ನಿಷ್ಠೆ ಹಾಗೂ ಪ್ರಾಮಾಣಿಕತೆ ಇರಬೇಕು ಎಂದು ಹೇಳಿದರು.

ಚಿತ್ರದುರ್ಗ ನಗರ ಸೇರಿದಂತೆ ಜಿಲ್ಲೆಯಲ್ಲಿ ಕುಡಿಯುವ ನೀರಿನ ಅಭಾವ ಇದೆ. ಹಾಗಾಗಿ ಪ್ರತಿಯೊಬ್ಬರಿಗೂ ಕುಡಿಯುವ ನೀರು ಒದಗಿಸುವ ನಿಟ್ಟಿನಲ್ಲಿ ಜಾರಿಯಾಗಿರುವ ಜಲಜೀವನ್ ಮಿಷನ್ ಯೋಜನೆಯ ಅನುಷ್ಠಾನಕ್ಕೆ ಹೆಚ್ಚಿನ ಆದ್ಯತೆ ನೀಡಬೇಕು. ಯಾವುದೇ ಕಾರಣಕ್ಕೂ ಕುಡಿಯುವ ನೀರಿನ ಯೋಜನೆ ಅನುಷ್ಠಾನಕ್ಕೆ ವಿಳಂಬ ಸಲ್ಲದು ಎಂದು ಹೇಳಿದರು.

ಕಾಮಗಾರಿ ವಿಳಂಬಕ್ಕೆ ನೋಟಿಸ್ ಜಾರಿ ಮಾಡಿ: ಜಿಲ್ಲೆಯಲ್ಲಿ ಜಲಜೀವನ್ ಮಿಷನ್ ಕಾಮಗಾರಿಯನ್ನು ನಿಗದಿತ ಸಮಯದೊಳಗೆ ಪೂರ್ಣಗೊಳಿಸದ ಕಂಟ್ರ್ಯಾಕ್ಟರ್‌ಗಳಿಗೆ ದಂಡ ವಿಧಿಸುವ ಜೊತೆಗೆ ನೋಟಿಸ್ ಜಾರಿಮಾಡಬೇಕು





ಎಂದು ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಕಾರ್ಯಪಾಲಕ ಇಂಜಿನಿಯರ್‌ಗೆ ಸೂಚನೆ ನೀಡಿದರು.

ಜಲಜೀವನ್ ಮಿಷನ್ ಯೋಜನೆ ಕಾಮಗಾರಿಯ ಕಾರ್ಯಾದೇಶ ಹಾಗೂ ಭೌತಿಕ ಅನುಷ್ಠಾನದಲ್ಲಿ ಬಹಳಷ್ಟು ವ್ಯತ್ಯಾಸ ಕಂಡುಬರುತ್ತಿದೆ.

ಕಾಮಗಾರಿಯನ್ನು ನಿಗದಿತ ಸಮಯದೊಳಗೆ ಮುಗಿಸದಿದ್ದರೆ ಶಿಸ್ತು ಕ್ರಮ ಜರುಗಿಸಬೇಕು. ಆದರೆ ಕೆಲಸದಲ್ಲಿ ನಿಯಮ ಉಲ್ಲಂಘನೆಯಾಗದಂತೆ ಅಗತ್ಯ ಕ್ರಮವಹಿಸಬೇಕು. ಕಾಮಗಾರಿ ಗುಣಮಟ್ಟ ಹಾಗೂ ಪ್ರಗತಿ ಕುರಿತು ಹೆಚ್ಚಿನ ನಿಗಾವಹಿಸಬೇಕು ಎಂದು ತಾಕೀತು ಮಾಡಿದರು.

ಮಕ್ಕಳಿಗೆ ಗುಣಮಟ್ಟದ ಬಿಸಿಯೂಟ ನೀಡಿ: ಶಾಲಾ ಮಕ್ಕಳಿಗೆ ಉತ್ತಮ ಗುಣಮಟ್ಟದ ಪೋಷಕಾಂಶ ಭರಿತ ಮಧ್ಯಾಹ್ನದ ಬಿಸಿಯೂಟ ನೀಡಬೇಕು ಎಂದು ಅಕ್ಷರದಾಸೋಹ ಶಿಕ್ಷಣಾಧಿಕಾರಿಗೆ ಸೂಚನೆ ನೀಡಿದರು.

"ಮಕ್ಕಳಿಗೆ ಉತ್ತಮಗುಣಮಟ್ಟದ ಊಟ ಕೊಡ್ತಿರಾ, ತಾಜಾ ತರಕಾರಿ ಬಳಸಬೇಕು. ನೀವು ಊಟ ಟೆಸ್ಟ್ ಮಾಡ್ತಿರಾ ಎಂದು ಪ್ರಶ್ನಿಸಿದ ಅವರು, ಅಂಗನವಾಡಿ ಹಾಗೂ ಶಾಲಾ ಮಕ್ಕಳಿಗೆ ಉತ್ತಮ ಪೌಷ್ಠಿಕ ಆಹಾರ ನೀಡಬೇಕು. ಊಟದ ಗುಣಮಟ್ಟ ಪರಿಶೀಲನೆಗೆ ಬಿಇಒಗಳ ತಂಡ ರಚನೆ ಮಾಡಿ, ಅನಿರೀಕ್ಷಿತವಾಗಿ ಶಾಲೆಗಳಿಗೆ ಭೇಟಿ ನೀಡಿ, ಪರಿಶೀಲನೆ ಮಾಡಬೇಕು ಎಂದು ತಾಕೀತು ಮಾಡಿದರು.

ಅಂಧತ್ವ ನಿವಾರಣೆ ಶಸ್ತ್ರಚಿಕಿತ್ಸೆಗೆ ಶಿಬಿರ ನಡೆಸಿ: ಅಂಧತ್ವ ನಿವಾರಣಾ ಕಾರ್ಯಕ್ರಮದಡಿಯಲ್ಲಿ ಶಿಬಿರಗಳನ್ನು ಆಯೋಜಿಸುವ ಮೂಲಕ ಕಣ್ಣಿನ ಪೊರೆ ಶಸ್ತ್ರಚಿಕಿತ್ಸೆಗಳನ್ನು ನಡೆಸಬೇಕು ಎಂದು ಡಿಹೆಚ್‌ಓಗೆ ಸೂಚನೆ ನೀಡಿದರು.

ಅಂಧತ್ವ ನಿವಾರಣಾ ಕಾರ್ಯಕ್ರಮದಡಿಯಲ್ಲಿ ಅಂಧತ್ವ ನಿವಾರಣೆ ಕೈಗೊಂಡ ಶಸ್ತ್ರಚಿಕಿತ್ಸೆಯಲ್ಲಿ ಖಾಸಗಿ ವೈದ್ಯರ ಸಹಯೋಗದಲ್ಲಿ ಶೇ.70 ರಷ್ಟು ಪ್ರಗತಿ ಸಾಧಿಸಿರುವುದಕ್ಕೆ ಅಸಮಾಧಾನ ವ್ಯಕ್ತಪಡಿಸಿದ ಅವರು, ಜಿಲ್ಲಾ ಆಸ್ಪತ್ರೆಯಲ್ಲಿಯೇ ಇಬ್ಬರು ನೇತ್ರ ತಜ್ಞರಿದ್ದು, ಹೆಚ್ಚು ಹೆಚ್ಚು ಶಿಬಿರಗಳನ್ನು ಆಯೋಜಿಸುವ ಮೂಲಕ ನೇತ್ರ ತಪಾಸಣೆ ಹಾಗೂ ಶಸ್ತ್ರಚಿಕಿತ್ಸೆಗಳನ್ನು ನಡೆಸಬೇಕು. ಸರ್ಕಾರಿ ಆಸ್ಪತ್ರೆಗಳಲ್ಲಿ ತಜ್ಞ ವೈದ್ಯರು, ಶುಶ್ರೂಷಕರು ಸೇರಿದಂತೆ ಅಗತ್ಯ ಸಿಬ್ಬಂದಿ ಹಾಗೂ ಸಾಧನ ಸಲಕರಣೆಗಳು ಇದ್ದರೂ ಸರಿಯಾದ ಆರೋಗ್ಯ ಸೇವೆ ನೀಡುತ್ತಿಲ್ಲ. ಖಾಸಗಿ ಆಸ್ಪತ್ರೆಗಳಲ್ಲಿ ಕಣ್ಣಿನಪೊರೆ ಶಸ್ತ್ರಚಿಕಿತ್ಸೆಗೆ ಕನಿಷ್ಟವೆಂದರೂ 50 ಸಾವಿರ ರೂ. ಖರ್ಚಾಗುತ್ತದೆ. ಬಡವರು ಇಷ್ಟೊಂದು ಭರಿಸಲು ಸಾಧ್ಯವೇ, ಬಡ ರೋಗಿಗಳು ಖಾಸಗಿ ಆಸ್ಪತ್ರೆಗಳಿಗೆ ಹೋಗದಂತೆ ಸರ್ಕಾರಿ ಆಸ್ಪತ್ರೆಗಳಲ್ಲೇ ಉತ್ತಮ ಆರೋಗ್ಯ ಸೇವೆ ನೀಡಬೇಕು. ಉತ್ತಮ ಲೆನ್ಸ್ ಅಳವಡಿಸಿ ಆಯುಷ್ಮಾನ್ ಕಾರ್ಡ್ ಯೋಜನೆಯಡಿ ಶಸ್ತ್ರಚಿಕಿತ್ಸೆಯ ಖರ್ಚು ಭರಿಸಬೇಕು ಎಂದು ತಾಕೀತು ಮಾಡಿದರು.


ಜಿಲ್ಲಾ ಕ್ರೀಡಾಂಗಣ ಉನ್ನತೀಕರಿಸಿ : ನಗರದಲ್ಲಿರುವ ಒನಕೆ ಓಬವ್ವ ಜಿಲ್ಲಾ ಕ್ರೀಡಾಂಗಣ ಸಮರ್ಪಕ ನಿರ್ವಹಣೆಯಾಗುತ್ತಿಲ್ಲ, ಈಜು ಕೊಳವಿದ್ದರೂ ಬಳಕೆಯಿಲ್ಲದೆ ಸ್ಥಗಿತಗೊಂಡಿದೆ ಎನ್ನುವ ದೂರುಗಳು ಕೇಳಿಬರುತ್ತಿವೆ. ಜಿಲ್ಲಾ ಕ್ರೀಡಾಂಗಣದಲ್ಲಿ ಉತ್ತಮ ಸೌಲಭ್ಯ ಅಳವಡಿಕೆ, ಹಾಗೂ ಕ್ರೀಡಾಂಗಣವನ್ನು ಮೇಲ್ದರ್ಜೆಗೇರಿಸಲು ಕೆಎಂಇಆರ್‌ಸಿ ಅನುದಾನದಡಿ ಪ್ರಸ್ತಾವನೆ ಸಿದ್ಧಪಡಿಸಿ ಸಲ್ಲಿಸುವಂತೆ ಸೂಚನೆ ನೀಡಿದ ಅವರು, ಈಜುಕೊಳ ನಿರ್ವಹಣೆಗೆ ಖಾಸಗಿ ಏಜೆನ್ಸಿಗೆ ಜವಾಬ್ದಾರಿ ನೀಡದೆ, ಇತರೆ ಈಜು ತರಬೇತುದಾರರು ಹಾಗೂ ಕೆಲವು ಸಿಬ್ಬಂದಿಯನ್ನು ಹೊರಗುತ್ತಿಗೆ ಆಧಾರದಲ್ಲಿ ನೇಮಿಸಿ, ಜಿಲ್ಲಾ ಮಟ್ಟದಲ್ಲಿಯೇ ನಿರ್ವಹಣೆ ಮಾಡುವಂತೆ ಸೂಚನೆ ನೀಡಿದರು.

ವಿದ್ಯಾರ್ಥಿ ನಿಲಯಗಳಲ್ಲಿ ಮಕ್ಕಳ ದೂರು ಪುಸ್ತಕ ಕಡ್ಡಾಯ: ಜಿಲ್ಲೆಯ ಎಲ್ಲಾ ವಿದ್ಯಾರ್ಥಿ ನಿಲಯಗಳಲ್ಲಿ ಕಡ್ಡಾಯವಾಗಿ ಮಕ್ಕಳ ದೂರು ಪುಸ್ತಕ ಇಡಬೇಕು ಎಂದು ಜಿಲ್ಲಾ ಪಂಚಾಯಿತಿ ಆಡಳಿತಾಧಿಕಾರಿ ಅಮಲಾನ್ ಆದಿತ್ಯ ಬಿಸ್ವಾಸ್ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಕುಡಿಯುವ ನೀರಿನ ಅಭಾವ, ಊಟದ ಸಮಸ್ಯೆ, ಶೌಚಾಲಯ ನಿರ್ವಹಣೆ ಸಮರ್ಪಕವಾಗಿಲ್ಲದಿರುವುದು ಸೇರಿದಂತೆ ಸಾಕಷ್ಟು ದೂರುಗಳು ಬರುತ್ತಿವೆ. ಹಾಗಾಗಿ ಮಕ್ಕಳ ದೂರು ಸಂಗ್ರಹಿಸಲು ಕಡ್ಡಾಯವಾಗಿ ಎಲ್ಲಾ ವಿದ್ಯಾರ್ಥಿನಿಲಯಗಳಲ್ಲಿ ಮಕ್ಕಳ ದೂರು ಪುಸ್ತಕ ಇಡಬೇಕು. ಪ್ರತಿ ತಿಂಗಳು ವಿದ್ಯಾರ್ಥಿ ನಿಲಯದ ನಿಲಯ ಪಾಲಕರು ತಮ್ಮ ಸಹಿಯೊಂದಿಗೆ ತಾಲ್ಲೂಕು ಪಂಚಾಯಿತಿ ಇಒ ಅವರಿಗೆ ವರದಿ ಸಲ್ಲಿಸಬೇಕು. ತಾಲ್ಲೂಕು ಪಂಚಾಯಿತಿ ಇಒ ಗಳು ಅಗತ್ಯ ಕ್ರಮವಹಿಸಬೇಕು ಎಂದು ಹೇಳಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಜೆ.ಸೋಮಶೇಖರ್, ಯೋಜನಾ ನಿರ್ದೇಶಕ ಡಾ.ರಂಗಸ್ವಾಮಿ, ಮುಖ್ಯ ಯೋಜನಾಧಿಕಾರಿ ಸತೀಶ್ ರೆಡ್ಡಿ ಸೇರಿದಂತೆ ಜಿಲ್ಲಾಮಟ್ಟದ ವಿವಿಧ ಇಲಾಖೆ ಅಧಿಕಾರಿಗಳು ಇದ್ದರು.

# ಉತ್ತಮ ಮಳೆ ಬೆಳೆಯಾಗಲಿ ಎಂದು ದೇವರಲ್ಲಿ ಪ್ರಾರ್ಥಿಸಿದ್ದೇನೆ: ಟಿ.ರಘುಮೂರ್ತಿ



» **ಚಿತ್ರದುರ್ಗ**

ತಾಲೂಕಿನ ಬೆಳಘಟ್ಟ ಗ್ರಾಮದಲ್ಲಿ ಎತ್ತಿನ ಜಾತ್ರೆಯ ಪ್ರಯುಕ್ತ ಇಂದು ಬೆಳಘಟ್ಟ ಗ್ರಾಮದ ಕೆರೆಯ ಬಳಿಯಲ್ಲಿ ಬುಡಕಟ್ಟು ಆರಾಧ್ಯ ದೇವರುಗಳಾದ ಸೂರ್ಯ ಎರಘಟ್ಟನಾಯಕ, ಗಾದ್ರಿಪಾಲನಾಯಕ, ಜೋಗ ಮುತ್ತಯ್ಯ, ಮಲ್ಲೆ ಚೌಡಮ್ಮ ದೇವರುಗಳಿಗೆ ಪೂಜೆ ಸಲ್ಲಿಸುವ ಮೂಲಕ ಹಬ್ಬ ಆಚರಣೆ ಮಾಡಲಾಯಿತು.

ಈ ಸಂದರ್ಭದಲ್ಲಿ ಚಳ್ಳಕೆರೆ ಶಾಸಕ ಟಿ.ರಘುಮೂರ್ತಿ ದೇವರುಗಳಿಗೆ ವಿಶೇಷವಾದ ಪೂಜೆಯನ್ನು ಸಲ್ಲಿಸಿ ಮಾತನಾಡಿ ಜಿಲ್ಲೆಯ ಜನರಿಗೆ ಉತ್ತಮ ಮಳೆ ಬೆಳೆ ಆಗಲಿ ಎಂದು ದೇವರಲ್ಲಿ ಪ್ರಾರ್ಥನೆ ಸಲ್ಲಿಸಿದ್ದೇನೆ. ನಮ್ಮ ಜಿಲ್ಲೆ ಬುಡಕಟ್ಟು ಸಂಪ್ರದಾಯದ ತವರೂರಾಗಿದೆ.ಬುಡಕಟ್ಟು ಆಚರಣೆಯನ್ನು ಮೊದಲಿನಿಂದಲೂ ನಾವು ಆಚರಣೆ ಮಾಡಿಕೊಂಡು ಬರುತ್ತಿದ್ದು ಪ್ರತಿ ವರ್ಷದಂತೆ ಈ ವರ್ಷ ಸಹ ಬೆಳಘಟ್ಟ ಗ್ರಾಮದ ಕೆರೆಯ ಬಳಿ ಎಲ್ಲಾ ದೇವರುಗಳಿಗೆ ಗಂಗಮ್ಮ ಪೂಜೆ ಮಾಡಿ ನಮ್ಮ ಆರಾಧ್ಯ ದೈವ ಎತ್ತುಗಳಿಗೆ ಪೂಜೆ ಸಲ್ಲಿಸಿ ಹಬ್ಬವನ್ನು ಆಚರಣೆ ಮಾಡುತ್ತೇವೆ.ದೀಪಾವಳಿ ಅಮಾವಾಸ್ಯೆ ಆದ ನಂತರ ದೊಡ್ಡಗೌರಿ ಹುಣ್ಣಿಮೆ ಬಂದ ಸಂದರ್ಭದಲ್ಲಿ ಈ ಹಬ್ಬ ಮಾಡಲಾಗುತ್ತದೆ. ಎರಡು ದಿನಗಳ ಕಾಲ ನಡೆಯುವ ಜಾತ್ರೆಯಲ್ಲಿ ಎಲ್ಲಾ ಸುತ್ತಮುತ್ತಲಿನ ಗ್ರಾಮದವರು ಬರುತ್ತಾರೆ. ನಾನು ಸಹ ಪ್ರತಿ ವರ್ಷ ಆಗಮಿಸಿ ಪೂಜೆ ಸಲ್ಲಿಸುತ್ತೇನೆ.

ಪ್ರತಿ ಗ್ರಾಮಗಳಲ್ಲಿ ಬುಡಕಟ್ಟು ಆಚರಣೆಯಿಂದ ಹಳ್ಳಿಗಳಿಗೆ ಒಂದು ರೀತಿಯಲ್ಲಿ ಶಾಂತಿ ನೆಲೆಸುತ್ತದೆ ಎಂಬುದು ಪ್ರತೀತಿಯಾಗಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಮಾಜಿ.ಜಿ.ಪಂ.ಸದಸ್ಯ ಬಾಬುರೆಡ್ಡಿ, ಬೆಳಘಟ್ಟ ಗ್ರಾಮ ಪಂಚಾಯತಿ ಅಧ್ಯಕ್ಷೆ ಎಂ.ಆರ್.ಮಂಜಶ್ರೀ ಪಾಲಯ್ಯ, ಉಪಾಧ್ಯಕ್ಷ ಡಿ.ಎ.ರಾಮಚಂದ್ರರೆಡ್ಡಿ, ಗ್ರಾಮ ಪಂಚಾಯತಿ ಸದಸ್ಯರಾದ ಹನುಮಂತರೆಡ್ಡಿ, ಕಮಲಮ್ಮ ಓಬಯ್ಯ, ಕವಿತಾ , ಕೆ.ಹೆಚ್.ನಾಗೇಶ್, ಮುಖಂಡರು ತಿಪ್ಪೇಸ್ವಾಮಿ, ಜಗದೀಶ್, ಎ.ಪಿ.ಸುರೇಶ್, ಬಕ್ಕೇಶ್ ರೆಡ್ಡಿ ಇದ್ದರು.

### ವಕೀಲರ ಮೇಲೆ ಮನಬಂದಂತೆ ಥಳಿತ, ವಕೀಲರಿಂದ ಡಿಸಿಗೆ ಮನವಿ




» **ದಾವಣಗೆರೆ**

ವಕೀಲ ಪ್ರೀತಮ್ ಮೇಲೆ ಮನ ಬಂದಂತೆ ಥಳಿಸಿರುವ ಚಿಕ್ಕಮಗಳೂರು ಪೊಲಿಸ್ ಇಲಾಖೆಯ ಪಿಎಸ್ಐ ಹಾಗೂ ಸಿಬ್ಬಂದಿ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳು ಸರ್ಕಾರಕ್ಕೆ ಶಿಫಾರಸು ಮಾಡುವಂತೆ ಆಗ್ರಹಿಸಿ ದಾವಣಗೆರೆ ಜಿಲ್ಲಾ ವಕೀಲರ ಸಂಘವು ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿದೆ.ನವೆಂಬರ್ 30ರಂದು ಸಂಜೆ 6ರ ಸುಮಾರಿಗೆ ಚಿಕ್ಕಮಗಳೂರಿನಲ್ಲಿ ವಕೀಲ ಪ್ರೀತಮ್ ಮೇಲೆ ಸ್ಥಳೀಯ ಪಿಎಸ್ಐ ಮಹೇಶ್ ಪೂಜಾರಿ ಹಾಗೂ ಇತರೆ 6 ಸಿಬ್ಬಂಧಿಗಳು ಮನ ಬಂಧಂತೆ ಥಳಿಸಿ ಮಾರಣಾಂತಿಕ ಹಲ್ಲೆ ಮಾಡಿದ್ದಾರೆ. ಈ ಘಟನೆಯನ್ನು ದಾವಣಗೆರೆ ಜಿಲ್ಲಾ ವಕೀಲರ ಸಂಘದ ಎಲ್ಲಾ ಸರ್ವ ಸದಸ್ಯರು ಖಂಡಿಸುತ್ತದೆ ಎಂದು ವಕೀಲರ ಸಂಘವು ಹೇಳಿದೆ.ವಿನಾಕಾರಣ ವಕೀಲರ ಮೇಲೆ ಮನಬಂದಂತೆ ಥಳಿಸಿರುವ ಆಪಾಧಿತರ ಮೇಲೆ ಜಿಲ್ಲಾಧಿಕಾರಿಗಳು ಸರ್ಕಾರಕ್ಕೆ ಶಿಫಾರಸು ಮಾಡುವ ಮೂಲಕ ಅವರ ಮೇಲೆ ಸೂಕ್ತ ಕಾನೂನು ಕ್ರಮ ಕೈಗೊಳ್ಳುವಂತೆ, ಅಲ್ಲದೇ ಇಂತಹ ಘಟನೆಗಳು ಮರುಕಳಿಸದಂತೆ ಕ್ರಮ ವಹಿಸಬೇಕೆಂದು ಒತ್ತಾಯಿಸಿ ದಾವಣಗೆರೆ ಜಿಲ್ಲಾ ವಕೀಲರ ಸಂಘದ ಸರ್ವ ಸದಸ್ಯರು ಮನವಿಯನ್ನು ಸರ್ಕಾರಕ್ಕೆ ಸಲ್ಲಿಸಿದರು.ಈ ವೇಳೆ ವಕೀಲರ ಸಂಘದ ಅಧ್ಯಕ್ಷ ಎಲ್.ಹೆಚ್.ಅರುಣಕುಮಾರ್, ಉಪಾಧ್ಯಕ್ಷ ಜಿ.ಕೆ.ಬಸವರಾಜ್ ಗೋಪನಾಳು, ಕಾರ್ಯದರ್ಶಿ ಎಸ್.ಬಸವರಾಜ್, ಸಹ ಕಾರ್ಯದರ್ಶಿ ಮಂಜುನಾಥ್, ವಕೀಲರಾದ ಎಂ.ಎನ್.ಆಂಜನೇಯ, ಸಿ.ಎಂ. ಚನ್ನಕೇಶವ, ಎಸ್.ಪರಮೇಶ್, ಬಿ.ಎಸ್.ಲಿಂಗರಾಜ್, ಎಂ.ಜಿ.ರಮೇಶ್, ಬಿ.ಎಂ.ಹನುಮಂತಪ್ಪ ಇದ್ದರು.

## ಪ್ರಮುಖ ಸುದ್ದಿ

# ಜಾತಿ ಮೀರಿ ನಡೆದ ವೈಭವದ ಕೂಗೊ ಮಲ್ಲಪ್ಪನ ಪರಿಷೆ

» **ಹೊಸದುರ್ಗ**

ಭಕ್ತರ ಇಷ್ಟಾರ್ಥಗಳನ್ನು ಈಡೇರಿಸುವ ದೈವ ನಮ್ಮ ಮಲ್ಲಪ್ಪ, ಎಂದು ಇಲ್ಲಿನ ಭಕ್ತರು ನಂಬಿರುವ ತಾಲೂಕಿನ ಹೊಳಲ್ಕೆರೆ,ಹೊಸದುರ್ಗ ಗಡಿಗೆ ಹೊಂದಿಕೊಂಡಿರುವ ನಾಗರಕಟ್ಟೆ ಕೂಗೋ ಮಲ್ಲಪ್ಪನ ಜಾತ್ರೆಯನ್ನು ಕಣ್ತುಂಬಿಕೊಳ್ಳಲು ಸುತ್ತಮುತ್ತಲ ಹತ್ತೂರ ಭಕ್ತರು ಕಾದು ಕುಳಿತಿರುತ್ತಾರೆ. ಎಲ್ಲಾ ಜಾತ್ರೆಯಂಗಲ್ಲ ನಮ್ಮೂರ ಮಲ್ಲಪ್ಪನ ಪರಿಚಯ ಎಂದು ಹೇಳುತ್ತಾರೆ , ಊರ ಹೊರಗಡೆ ದಿಬ್ಬದ ಮೇಲೆ ನೆಲೆ ನಿಂತಿರುವ ನಮ್ಮೂರ ಮಲ್ಲಪ್ಪ ಹಿಂದೆ ಹೆಸರಾಗಿರುವ ಮಲ್ಲಿಕಾರ್ಜುನ ಸ್ವಾಮಿ ಜಾತ್ರೆಗೆಂದು ಪಕ್ಕದ ಹೊಳಲ್ಕೆರೆ ತಾಲೂಕಿನ ಗೌಡಿಹಳ್ಳಿ ಹೊಸಹಟ್ಟಿ ಕಡ್ಲಪ್ಪನಹಟ್ಟಿ ಎನ್ ಜಿ ಹಳ್ಳಿ ಗೊಲ್ಲರಹಳ್ಳಿ ಕಬ್ಬಳ ಮಾವಿನಕಟ್ಟೆ ಭೀಸನಹಳ್ಳಿ ತುಂಬಿನಕೆರೆ ಹೇರೂರು ಹೆಬ್ಬಳ್ಳಿ ಹೀಗೆ ಸುತ್ತಮುತ್ತಲಿನ ಹತ್ತೂರ ಜನಗಳು ಈ ಜಾತ್ರೆಗೆ ತಮ್ಮ ಇಷ್ಟಾರ್ಥಗಳನ್ನು ಈಡೇರಿಸಿಕೊಳ್ಳಲು ಕುಟುಂಬ ಸಮೇತರಾಗಿ ಬಂದು ಶ್ರೀ ಮಲ್ಲಿಕಾರ್ಜುನ ಸ್ವಾಮಿಯ ಆಶೀರ್ವಾದ ಪಡೆಯುತ್ತಾರೆ,

ವೈಭವದ ಕೂಗೊ ಮಲ್ಲಪ್ಪನ ಪರಿಷೆ,





ಹೊಸದುರ್ಗ : ಭಕ್ತರ ಇಷ್ಟಾರ್ಥಗಳನ್ನು ಈಡೇರಿಸುವ ದೈವ ನಮ್ಮ ಮಲ್ಲಪ್ಪ ತಾಲೂಕಿನ ಹೊಳಲ್ಕೆರೆ ಹೊಸದುರ್ಗ ಗಡಿಗೆ ಹೊಂದಿಕೊಂಡಿರುವ ನಾಗರಕಟ್ಟೆ ಕೂಗೋ ಮಲ್ಲಪ್ಪನ ಜಾತ್ರೆಯನ್ನು ಕಣ್ತುಂಬಿಕೊಳ್ಳಲು ಸುತ್ತಮುತ್ತಲ ಹತ್ತೂರ ಭಕ್ತರು ಕಾದು ಕುಳಿತಿರುತ್ತಾರೆ. ಎಲ್ಲಾ ಜಾತ್ರೆಯಂಗಲ್ಲ ನಮ್ಮೂರ ಮಲ್ಲಪ್ಪನ ಪರಿಷೆ ಎಂದು ಹೇಳುತ್ತಾರೆ ಗುಡಿ ಗೌಡ ಹಾಗೂ ಗ್ರಾಪಂ ಸದಸ್ಯ ನಿರಂಜನ್,

ಊರ ಹೊರಗಡೆ ಚಿಕ್ಕಬೆಟ್ಟದ ಮೇಲೆ ನೆಲೆ ನಿಂತಿರುವ ಕೂಗೋ ಮಲ್ಲಪ್ಪ ಹಿಂದೆ ಹೆಸರಾಗಿರುವ ಮಲ್ಲಿಕಾರ್ಜುನ ಸ್ವಾಮಿ ಜಾತ್ರೆಗೆಂದು ಸುತ್ತಮುತ್ತಲಿನ ಹತ್ತೂರ ಜನಗಳು ಈ ಜಾತ್ರೆಗೆ ತಮ್ಮ ಇಷ್ಟಾರ್ಥಗಳನ್ನು ಈಡೇರಿಸಿಕೊಳ್ಳಲು ಕುಟುಂಬ ಸಮೇತರಾಗಿ ಬಂದು ಶ್ರೀ ಮಲ್ಲಿಕಾರ್ಜುನ ಸ್ವಾಮಿಯನ್ನ ಕಣ್ತುಂಬಿಕೊಳ್ಳುತ್ತಾರೆ, 15 ದಿನ ಮುಂಚಿತವಾಗಿಯೇ ಜಾತ್ರೆಯ ಪೂಜಾ ಕಾರ್ಯಗಳು ಪ್ರಾರಂಭಗೊಳ್ಳುತ್ತವೆ, ಶ್ರೀ ಮಲ್ಲಿಕಾರ್ಜುನ ಸ್ವಾಮಿಯು ನಾಗರಕಟ್ಟೆ ಭಕ್ತರ ಜೊತೆಗೂಡಿ ಕಂತೆ ಭಿಕ್ಷಕ್ಕೆಂದು ಸುತ್ತಮುತ್ತಲಿನ 10 ಗ್ರಾಮಗಳಿಗೆ ತೆರಳಿ ಕಂತೆ ಭಿಕ್ಷವನ್ನು ಮಾಡುತ್ತಾರೆ. ಗುರುವಾರ ಸಂಜೆ ದೇವಗೆರೆ ಎನ್, ಜಿ,ಹಳ್ಳಿ ತುಂಬಿನಕೆರೆ,ಬೀಸನಹಳ್ಳಿ, ಮಾವಿನಕಟ್ಟೆ ದೇವರುಗಳು ನಾಗರಕಟ್ಟೆ ಗ್ರಾಮಕ್ಕೆ ಸಂಜೆ ಬಂದು ಕೂಡು ಬೇಟಿ ಉತ್ಸವ ಮಾಡಿ ಬೆಳಗಿನ ಜಾವ ಈ ದೇವರುಗಳು ಮಲ್ಲಿಕಾರ್ಜುನ ಸ್ವಾಮಿ ಸನ್ನಿಧಾನ ತಲುಪುತ್ತವೆ, ಶುಕ್ರವಾರ ಬೆಳಗಿನ ಜಾವ ಶ್ರೀ ಮಲ್ಲಿಕಾರ್ಜುನ ಸ್ವಾಮಿಯ ಪಲ್ಲಕ್ಕಿಯನ್ನು ಹೊತ್ತ ಭಕ್ತರು ವೀರಗಾಸೆಯ ಮುಖಾಂತರ ದಕ್ಷಯಜ್ಞವನ್ನು ಮಾಡಿ ನಂತರ ಕೆಂಡದಾರ್ಚನೆಯನ್ನು ನೆರವೇರಿಸುತ್ತಾರೆ, ನಂತರ ಕಂತೆ ಬಿಕ್ಷದ ಮೂಲಕ ತಂದ ಪದಾರ್ಥವನ್ನು ಅನ್ನದಾಸೋಕೆ ಬಳಸುತ್ತಾರೆ, ವೀರಶೈವ ಪರಂಪರೆಯಲ್ಲಿ ಜಾತ್ರಾ ಮಹೋತ್ಸವ ನಡೆದು ಜಾತಿ ವರ್ಗಗಳನ್ನು ಧರ್ಮವನ್ನು ಮೀರಿ ಎಲ್ಲಾ ಭಕ್ತರಿಗೂ ಮಲ್ಲಿಕಾರ್ಜುನ ಸ್ವಾಮಿಯ ದರ್ಶನಕ್ಕೆ ಮುಕ್ತ ಅವಕಾಶವನ್ನು ಕಲ್ಪಿಸಿ ನಂತರ ಸಹಪಂಕ್ತಿ ಭೋಜನವನ್ನು ಏರ್ಪಡಿಸುತ್ತಾರೆ. ದಾಸ ಹೊತ್ತೆಂದು ಭಕ್ತರು ಅಕ್ಕಿ ಬೇಳೆ ಧಾನ್ಯದ ರೂಪದಲ್ಲಿ ತಮ್ಮ ಹರಕೆಯನ್ನು ತೀರಿಸುತ್ತಾರೆ.

ಶನಿವಾರ ಸಂಜೆ ಶ್ರೀ ಮಲ್ಲಿಕಾರ್ಜುನ ಸ್ವಾಮಿಯನ್ನು ನಾಗರಕಟ್ಟೆ ಗ್ರಾಮಕ್ಕೆ ತಂದು ಗ್ರಾಮದ ಶ್ರೀ ಆಂಜನೇಯ ಸ್ವಾಮಿ, ಶ್ರೀ ಕೊಟ್ಟೂರು ಬಸವೇಶ್ವರ ಸ್ವಾಮಿ ನೇತೃತ್ವದಲ್ಲಿ ಊರ ತುಂಬೆಲ್ಲ ಮೆರವಣಿಗೆ ಮಾಡಿ ಆಂಜನೇಯ ಸ್ವಾಮಿ ಸನ್ನಿಧಾನದ ಮುಂಭಾಗ ದೊಡ್ಡಡೆ ಸೇವೆ ಮಾಡುವರು, ಒಟ್ಟಾರೆ ಮಲ್ಲಪ್ಪನ ಪರಿಷೆಗೆಂದೇ ದೂರದ ಬೇರೆ ಬೇರೆ ದೇಶಗಳಲ್ಲಿರುವ ಈಗ ಗ್ರಾಮದ ಭಕ್ತರು ಇಲ್ಲಿಗೆ ಬಂದು ತಮ್ಮ ಹರಕೆಗಳನ್ನ ತೀರಿಸುವುದು ವಿಶೇಷವಾಗಿದೆ.

## ಫಾಸ್ಟ್ ನ್ಯೂಸ್

### ಹೆಚ್ಚುವರಿ ಪೋಲೀಸ್ ಅಧೀಕ್ಷಕರಾದ ಎಂ. ಬಾಬುರವರಿಗೆ ಅಭಿನಂದನೆಗಳು

» ಹಿರಿಯೂರು



ನಮ್ಮ ಹಿರಿಯೂರಿನ ಹೆಮ್ಮೆಯ ಪುತ್ರ, ನಗರದ ಸಮಕಾಲೀನ ಅವರ ಗೆಳೆಯರಿಗೆ ಆತ್ಮೀಯ ಸ್ನೇಹಿತ, ನಮ್ಮನಿಮ್ಮೆಲ್ಲರ ಆತ್ಮೀಯರು ಆಗಿದ್ದು, ರಾಜ್ಯ ಪೊಲೀಸ್ ಇಲಾಖೆಯಲ್ಲಿ ಸೇವೆ ಸಲ್ಲಿಸುತ್ತಿರುವ "ರಾಷ್ಟ್ರಪತಿ" ಹಾಗೂ "ಮುಖ್ಯಮಂತ್ರಿ" ಚಿನ್ನದ ಪದಕದಿಂದ ಪುರಸ್ಕೃತರಾದ ಇವರು ಇದೀಗ ಹೆಚ್ಚುವರಿ ಪೊಲೀಸ್ ಅಧೀಕ್ಷಕರಾಗಿ ಮುಂಬಡ್ತಿಯಾಗಿ ಮೈಸೂರು ಜಿಲ್ಲೆಗೆ ಸ್ಥಳ ನಿಯುಕ್ತಿಗೊಂಡಿರುವ ಎಂ.ಬಾಬುರವರಿಗೆ "ಹಿರಿಯೂರು ನ್ಯೂಸ್" ತಂಡದಿಂದ ಅಭಿನಂದನೆಗಳು.

ಶ್ರೀಯುತಎಂ.ಬಾಬುರವರಪರಿಶ್ರಮ,ವೃತ್ತಿಪರತೆ, ಕಡಕ್ ಪೋಲಿಸಿಂಗ್ ಹಾಗೂ ಅವರ ಮೌಲ್ಯಗಳು ಇಂದಿನ ಅವರ ಯಶಸ್ಸಿಗೆ ಕಾರಣಯೆಂದರೆ ತಪ್ಪಾಗಲಾರದು. ಅವರು ತಮ್ಮ ವೃತ್ತಿಯಲ್ಲಿ ಇನ್ನಷ್ಟು ಮೈಲಿಗಲ್ಲನ್ನು ಸಾಧಿಸಲಿ ಎಂಬುದಾಗಿ "ಹಿರಿಯೂರು ನ್ಯೂಸ್" ತಂಡದ ವತಿಯಿಂದ ಪತ್ರಕರ್ತರುಗಳಾದ ಆಲೂರುಹನುಮಂತರಾಯಪ್ಪ ಹಾಗೂ ಪಿ.ಆರ್.ಸತೀಶ್ ಬಾಬು, ಗೋಸಿಕೆರೆ ರಂಗನಾಥ್, ಕೇಶವಮೂರ್ತಿ, ಶ್ರೀಪಾದ್ ವಸಿಷ್ಠ, ಶಿವರಾಜ್, ಪರಮೇಶ್ವರಪ್ಪ, ವೆಂಕಟೇಶ್, ಇರ್ಫಾನ್ ವುಲ್ಲಾ, ಹಿದಾಯತ್ ವುಲ್ಲಾ ಇವರುಗಳು ಶುಭಹಾರೈಸಿದ್ದಾರೆ.

### ಸಾಯಿಬಾಬಾ ಮಂದಿರಕ್ಕೆ ರೋಟರಿ ಕ್ಲಬ್‌ವತಿಯಿಂದ ಶುದ್ಧ ಕುಡಿಯುವ ನೀರಿನ ಫೀಲ್ಟರ್ ಕೊಡುಗೆ



» ಚಳ್ಳಕೆರೆ

ನಗರದ ಸಾವಿರಾರು ಭಕ್ತರ ಆರಾಧ್ಯ ದೈವ ಸಿರಿಡಿ ಶ್ರೀಸಾಯಿಬಾಬಾ ಮಂದಿರದಕ್ಕೆ ರಾಜ್ಯದ ವಿವಿಧ ಭಾಗಗಳಿಂದ ಭಕ್ತರು ಆಗಮಿಸುವ ಹಿನ್ನೆಲೆಯಲ್ಲಿ ಭಕ್ತಾಧಿಗಳಿಗೆ ಉತ್ತಮ ಗುಣಮಟ್ಟದ ಶುದ್ಧ ಕುಡಿಯುವ ನೀರನ್ನು ಒದಗಿಸುವ ನಿಟ್ಟಿನಲ್ಲಿ ರೋಟರಿ ಕ್ಲಬ್ ನೂತನ ತಾಂತ್ರಿಕತೆಯಿಂದ ಕೂಡಿದ ಒಂದುನೂರು ಲೀಟರ್ ಸಾಮರ್ಥದ 40 ಸಾವಿರದ ರೂನ ಗುಣಮಟ್ಟದ ವಾಟರ್ ಫೀಲ್ಟರ್ ದೇಣಿಗೆ ನೀಡಿದರು.

ರೋಟರಿ ಕ್ಲಬ್ ಅಧ್ಯಕ್ಷ ಕೆ.ನಾಗೇಶ್, ಕ್ಲಬ್ ವತಿಯಿಂದ ನೀಡಲಾದ ನೀರಿನ ಘಟಕದ ಕೀಯನ್ನು ವೆಂಕಟಸಾಯಿ ಸೇವಾ ಟ್ರಸ್ಟ್ ಅಧ್ಯಕ್ಷ ಬಿ.ಸಿ.ಸಂಜೀವಮೂರ್ತಿಯವರಿಗೆ ಹಸ್ತಾಂತರಿಸಿದರು. ಭಕ್ತರು ತಮ್ಮ ಅನೇಕ ಬೇಡಿಕೆಗಳನ್ನು ಹೊತ್ತು ಸಾಯಿಬಾಬಾ ಮಂದಿರಕ್ಕೆ ಆಗಮಿಸುತ್ತಿದ್ದು, ಆಗಮಿಸುವ ಎಲ್ಲಾ ಭಕ್ತರಿಗೆ ಶ್ರೀಸಾಯಿಬಾಬಾ ಆಶೀರ್ವಾದ ನೀಡುವ ಮೂಲಕ ಭಕ್ತರಿಗೆ ಅವರ ಬೇಡಿಕೆಗಳನ್ನು ಈಡೇರಿಸುತ್ತಾ ಬಂದಿದ್ದಾರೆ. ಸಾಯಿಬಾಬಾರವರ ಕೃಪೆ ಎಲ್ಲಾ ಭಕ್ತರ ಮೇಲೆ ಇರಲಿ ಎಂದು ಅರ್ಪಿಸುವುದಾಗಿ ತಿಳಿಸಿದರು. ಸೇವಾ ಟ್ರಸ್ಟ್ ಅಧ್ಯಕ್ಷ ಬಿ.ಸಿ.ಸಂಜೀವಮೂರ್ತಿ, ಭಕ್ತಾಧಿಗಳ ಅನುಕೂಲಕ್ಕಾಗಿ ರೋಟರಿ ಕ್ಲಬ್ ಮತ್ತು ಇನ್ನರ್ ವೀಲ್ಡ್ ಕ್ಲಬ್ ಸದಸ್ಯರು ಇಂದು ಈ ಕೊಡುಗೆ ನೀಡಿದ್ದಾರೆ. ಇದರಿಂದ ಭಕ್ತರ ಕುಡಿಯುವ ನೀರಿ ದಾಹ ಈಡೇರಲಿದೆ. ಭಕ್ತರ ಅನುಕೂಲಕ್ಕಾಗಿ ಯಾವುದೇ ಕೊಡುಗೆ ನೀಡಿದರೂ ಅದನ್ನು ಗೌರವದಿಂದ ನಮ್ಮ ಟ್ರಸ್ಟ್ ಸ್ವೀಕರಿಸುತ್ತದೆ ಎಂದರು. ಹಿರಿಯ ಸದಸ್ಯ ಡಾ.ಕೆ.ಎಂ.ಜಯಕುಮಾರ್, ಎಸ್.ಜಯಪ್ರಕಾಶ್, ಇನ್ನರ್ ವೀಲ್ಡ್ ಕ್ಲಬ್ ಅಧ್ಯಕ್ಷೆ ಮೀರಾರಮೇಶ್, ಡಾ.ಎಲ್.ಎಸ್.ವೀರೇಶ್, ಡಾ.ನಾಗರಾಜು, ಬಿಆರ್‌ಟಿ, ಸಿದ್ದಾರ್ಥ, ಕೆ.ಪ್ರಕಾಶ್, ಸಂತೋಷ್‌ರೆಡ್ಡಿ, ಕಾರ್ಯದರ್ಶಿ ಸುನೀತಾಗೌಡ, ಅರ್ಪಣ, ರಾಜೇಶ್ವರಿ, ಕವಿತಾವಿಶುಕುಮಾರ್, ಟ್ರಸ್ಟ್ ಉಪಾಧ್ಯಕ್ಷ ಕೆ.ಎಂ.ಜಗದೀಶ್, ಕಾರ್ಯದರ್ಶಿ ಎಂ.ಆರ್.ರವಿಪ್ರಸಾದ್, ಬಾಲಾಜಿವೆಂಕಟೇಶ್ ಮುಂತಾದವರು ಉಪಸ್ಥಿತರಿದ್ದರು.

### ಬೆಂಕಿ ಹರಡುವಿಕೆ ಮತ್ತು ಅಗ್ನಿ ನಿಯಂತ್ರಣ ಜಾಗೃತಿ

» ಚಿತ್ರದುರ್ಗ

ದಾವಣಗೆರೆ ವಿಶ್ವವಿದ್ಯಾನಿಲಯ, ಜಿಲ್ಲಾ ಮದಕರಿ ನಾಯಕ ವಿದ್ಯಾಸಂಸ್ಥೆ, ಮಹಾರಾಜ ಮದಕರಿ ನಾಯಕ ಪ್ರಥಮ ದರ್ಜೆ ಕಲಾ ಮತ್ತು ವಾಣಿಜ್ಯ ಕಾಲೇಜು ಹಾಗೂ ರಾಷ್ಟ್ರೀಯ ಸೇವಾ ಯೋಜನೆ ಘಟಕ ಸಹಯೋಗದಲ್ಲಿ ವಿಶೇಷ ವಾರ್ಷಿಕ ಶಿಬಿರವನ್ನು ಡಿಸೆಂಬರ್ 5ರ ವರೆಗೆ ಹಮ್ಮಿಕೊಳ್ಳಲಾಗಿದೆ. ಇದರ ಅಂಗವಾಗಿ ಡಿ.02 ರಂದು ಬೆಳಿಗ್ಗೆ 11 ಗಂಟೆಗೆ ಚಿತ್ರದುರ್ಗ ತಾಲ್ಲೂಕಿನ ಕುಂಚಿಗನಾಳ್ ಗ್ರಾಮದಲ್ಲಿ ಬೆಂಕಿ ಹರಡುವಿಕೆ ಮತ್ತು ಅಗ್ನಿ ನಿಯಂತ್ರಣ ಜಾಗೃತಿ ಕುರಿತು ಜಿಲ್ಲಾ ಅಗ್ನಿಶಾಮಕ ಅಧಿಕಾರಿ ಸೋಮಶೇಖರ್ ವಿ. ಅಗಡಿ ಮತ್ತು ಸಿಬ್ಬಂದಿ ವರ್ಗದವರಿಂದ ಪ್ರಾತ್ಯಕ್ಷಿಕೆ ಕಾರ್ಯಕ್ರಮ ನಡೆಸಿಕೊಡುವರು.

## ಯುವ ಜನತೆಗೆ ಪ್ರೊಫೆಸರ್ ಜಿ.ಪರಮೇಶ್ವರಪ್ಪರವರು ಕರೆ

# ಅಂಬೇಡ್ಕರ್ ಆದರ್ಶ ರೂಢಿಸಿಕೊಳ್ಳಿ

» ಹಿರಿಯೂರು




ದೇಶದಲ್ಲಿ ವಾಸಿಸುವ ಎಲ್ಲರಿಗೂ ಸ್ವತಂತ್ರ ಸಮಾನತೆ ನೀಡಿ, ತಳಸಮುದಾಯ ಹಿಂದುಳಿದ ವರ್ಗ ಮತ್ತು ಮಹಿಳೆಯರಿಗೆ ವಿಶೇಷ ಮೀಸಲಾತಿಯನ್ನು ನೀಡಿದಂತಹ ಕೀರ್ತಿ ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರಿಗೆ ಸಲ್ಲುತ್ತದೆ ಎಂಬುದಾಗಿ ಜಿಲ್ಲಾ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತರಾದ ಪ್ರೊ.ಜಿ.ಪರಮೇಶ್ವರಪ್ಪ ಹೇಳಿದರು.

ನಗರದ ವಾಣಿ ಸಕ್ಕರೆ ಪ್ರಥಮ ದರ್ಜೆ ಕಾಲೇಜಿನಲ್ಲಿಕನ್ನಡಮತ್ತುಸಂಸ್ಕೃತಿ ಇಲಾಖೆ ಚಿತ್ರದುರ್ಗ, ವಾಣಿ ಸಕ್ಕರೆ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಎಸ್ಸಿ ಘಟಕ ಇವರುಗಳ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಳ್ಳಲಾಗಿದ್ದ ಭಾರತ ರತ್ನ ಡಾ.ಬಿ.ಆರ್.ಅಂಬೇಡ್ಕರ್ ಓದು ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ದೇಶದಲ್ಲಿ ದಮನಿತರಿಗೆ ಶೋಷಿತರಿಗೆ ಮಹಿಳೆಯರಿಗೆ ಸಮಾನತೆ ನೀಡಿ ಮನುಷ್ಯತ್ವ ಒಂದೇ ಸರ್ವ ಶ್ರೇಷ್ಠ ಎಂಬುದನ್ನು ಸಾರಿದ ಅಂಬೇಡ್ಕರ್ ರವರು ದಲಿತರು ದೇವಸ್ಥಾನಕ್ಕೆ ಬದಲಾಗಿ ಲೋಕಸಭೆಗೆ ವಿಧಾನಸಭೆಗೆ ಪ್ರವೇಶಿಸಬೇಕು, ಅದರ ಮೂಲಕ ಗ್ರಾಮೀಣ ಭಾಗದ ಜನರ ಸಮಸ್ಯೆಗಳಿಗೆ ಸ್ಪಂದಿಸಿ ಸಮಸ್ಯೆಗಳನ್ನು ಬಗೆಹರಿಸಬೇಕು ಎಂಬುದಾಗಿ ಅವರು ಹೇಳಿದರು.

ನಿವೃತ್ತ ಪ್ರಾಚಾರ್ಯರು ಹಾಗೂ ಸಾಹಿತಿಗಳಾದ ಪ್ರೊ.ಲಿಂಗಪ್ಪ ಮಾತನಾಡಿ, ಬುದ್ಧನ ಆಶಯಗಳನ್ನು ಬಸವಣ್ಣನವರ ಚಿಂತನೆಗಳನ್ನು ಸಂವಿಧಾನದ ಮೂಲಕ ಈಡೇರಿಸಿದಂತಹ ಕೀರ್ತಿ ಡಾ. ಬಿಆರ್ ಅಂಬೇಡ್ಕರ್ ಅವರಿಗೆ ಸಲ್ಲುತ್ತದೆ, ವಿಶ್ವದ 70 ರಾಷ್ಟ್ರಗಳ ಸಂವಿಧಾನವನ್ನು ಅಧ್ಯಯನ ಮಾಡಿ ಜೀವಪರ, ಮಾನವಪರ, ಮನುಷ್ಯತ್ವದ ಪರ ಇರುವ ಬೃಹತ್ ಸಂವಿಧಾನವನ್ನು ಈ ದೇಶಕ್ಕೆ ನೀಡಿದರು ಎಂದರಲ್ಲದೆ,

ವ್ಯಕ್ತಿಗೌರವ ದೇಶದ ಏಕತೆ ಸಹೋದರತೆಯ ಭಾವವನ್ನು ಬೆಳೆಸುವುದು ಸ್ವಾತಂತ್ರ್ಯ ಸಮಾನ ಅವಕಾಶ ಕಲ್ಪಿಸುವುದು ಸಂವಿಧಾನದ ಮುಖ್ಯ ಗುರಿಯಾಗಿದೆ, ಅಪಮಾನ ಅಸ್ಪೃಶ್ಯತೆ ಹಣದ ಅಭಾವದ ಮಧ್ಯೆ ಛಲ ಬಿಡದೆ ನಿರಂತರವಾಗಿ ಓದಿ ವಿಶ್ವಜ್ಞಾನಿಯಾಗಿ ರೂಪುಗೊಂಡಿದ್ದು ಅವಿಸ್ಮರಣೀಯ ಎಂದರು.

ಆರಂಭದಲ್ಲಿ ಚೌಡರಕೆರೆ ನೀರಿನ ಹೋರಾಟ, ಕಾಳರಾಮ ದೇವಾಲಯದ ಪ್ರವೇಶ ಮತ್ತು ಮನುಸ್ಮೃತಿಯನ್ನು ಸುಟ್ಟು ಹಾಕುವ ಮೂಲಕ ಜಾಗೃತಿಯ ಹೋರಾಟವನ್ನು ಮಾಡಿದರು, 1926ರಲ್ಲಿ ಬ್ರಿಟಿಷ್ ಪಾರ್ಲಿಮೆಂಟ್ ನಲ್ಲಿ ಕಾರ್ಮಿಕ ಮಂತ್ರಿ ಆಗಿ ದೇಶದ ಮಹಿಳೆಯರಿಗೆ ಮೊದಲ ಬಾರಿಗೆ ಹೆರಿಗೆ ಭತ್ಯೆ ಮತ್ತು ಹೆರಿಗೆ ರಜೆಯನ್ನು ಘೋಷಿಸಿದಂತಹ ಕೀರ್ತಿ ಅಂಬೇಡ್ಕರ್ ಅವರಿಗೆ ಸಲ್ಲುತ್ತದೆ ಎಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ವಾಣಿ ಸಕ್ಕರೆ ಸರ್ಕಾರಿ ಪ್ರಥಮದರ್ಜೆ ಕಾಲೇಜಿನ ಪ್ರಾಚಾರ್ಯರಾದ ಡಾ.ಆರ್. ಮಹೇಶ್ ಮಾತನಾಡಿ, ಗ್ರಾಮ ಪಂಚಾಯಿತಿ, ಜಿಲ್ಲಾ ಪಂಚಾಯಿತಿ, ತಾಲ್ಲೂಕು ಪಂಚಾಯಿತಿ ಹಾಗೂ ಸ್ಥಳೀಯ ಸರ್ಕಾರ ವ್ಯವಸ್ಥೆಯಲ್ಲಿ ಮಹಿಳೆಯರಿಗೆ ಶೇಕಡ 33 ರಷ್ಟು ಮೀಸಲಾತಿಯನ್ನು ನೀಡಿದ್ದು, ಸಂವಿಧಾನದ ಆಶಯವಾಗಿದೆ, ಸಂವಿಧಾನದ ರಚನಾ ಸಮಿತಿಯಲ್ಲಿ 284 ಜನ ಒಟ್ಟು ಸದಸ್ಯರಿದ್ದು, ಇದರಲ್ಲಿ 15 ಜನ ಸ್ತ್ರೀಯರು ಪಾಲ್ಗೊಂಡಿದ್ದು ಅವಿಸ್ಮರಣೀಯ ಎಂದು ಹೇಳಿದರು.

ಇದೇ ಸಂದರ್ಭದಲ್ಲಿ ಜಿಲ್ಲಾ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತರಾದ ಪ್ರೊ.ಹೆಚ್.ಲಿಂಗಪ್ಪ, ಪ್ರೊ.ಜಿ.ಮಹೇಶ್ವರಪ್ಪ ಇವರನ್ನು ಕಾಲೇಜಿನ ವತಿಯಿಂದ ಸನ್ಮಾನಿಸಿ ಗೌರವಿಸಲಾಯಿತು.

ಇದೇ ಸಂದರ್ಭದಲ್ಲಿ ಆಯೋಜಿಸಿದ್ದ ಪ್ರಬಂಧ ಸ್ಪರ್ಧೆಯಲ್ಲಿ ಪಿ.ಯಶಸ್ವಿನಿ, ಎಚ್.ಕವನ ಜಿ.ಡಿ.ರಾಜೇಶ್ವರಿ ಹಾಗೂ ಆಶುಭಾಷಣ ಸ್ಪರ್ಧೆಯಲ್ಲಿ ದಿವ್ಯಶ್ರೀ ಕೆ.ಆರ್.ರಂಗಸ್ವಾಮಿ, ಕೆ.ಸಿದ್ದೇಶ್, ಎಸ್. ಕವನ, ವಾಚನ ಸ್ಪರ್ಧೆಯಲ್ಲಿ ಎಸ್.ಕಿರಣ್, ಎಸ್.ಟಿ.ಎಸ್.ಲಿಂಗಯ್ಯ, ಶಿವ ಮತ್ತು ಬಿ.ವಿ.ಶೋಭಿತ, ರಸಪ್ರಶ್ನೆ ಸ್ಪರ್ಧೆಯಲ್ಲಿ ರಂಗಸ್ವಾಮಿ ಕೆ.ಸುಚಿತ್ರ, ಚಂದ್ರಕಲಾ ಇವರುಗಳು ಕ್ರಮವಾಗಿ ಪ್ರಥಮ ದ್ವಿತೀಯ ಹಾಗೂ ತೃತೀಯ ಬಹುಮಾನವನ್ನು ಪಡೆದರು. ಈ ಕಾರ್ಯಕ್ರಮದಲ್ಲಿ ಡಾ.ಬಿ.ಆರ್.ಅಂಬೇಡ್ಕರ್ ಓದು ಕಾರ್ಯಕ್ರಮದ ಸಂಚಾಲಕರಾದ ಹೆಚ್.ಜಿ.ರಂಗಸ್ವಾಮಿಸಕ್ಕರ, ಸಾಂಸ್ಕೃತಿಕ ಸಮಿತಿ ಸಂಚಾಲಕರಾದ ಬಿ.ಆರ್. ಹೇಮಲತಾ, ಐಕ್ಯೂಎಸಿ ಸಂಚಾಲಕರಾದ ವಿ.ಪಿ.ಜನಾರ್ಧನ್, ಅರ್ಥಶಾಸ್ತ್ರ ಮುಖ್ಯಸ್ಥರಾದ ಬಿ.ಜನಾರ್ದನ್, ಕುಮಾರ್, ರಾಜ್ಯಶಾಸ್ತ್ರ ಮುಖ್ಯಸ್ಥರಾದ ಜಿ.ಎಸ್.ರಾಮಪ್ಪ, ಜಗನ್ನಾಥ್, ಬಿ.ವಲಿ, ಆರ್.ಮೂರಾವರ್ಧನ್, ಟಿ.ಬಸವರಾಜ್ ಬೆಳಗಟ್ಟ, ಕೆ.ಹೆಚ್.ಮಹಾಂತೇಶ್, ರೇವಣ್ಣ ಹಾಗೂ ಇತರರು ಉಪಸ್ಥಿತರಿದ್ದರು.

# ವಿವಿಧ ಬೇಡಿಕೆ ಈಡೇರಿಕೆಗಾಗಿ ಈಡಿಗರಿಂದ ಡಿ.10 ರಂದು ಒಂದು ದಿನದ ಉಪವಾಸ

» ಚಿತ್ರದುರ್ಗ




ಈಡಿಗ ಬಿಲ್ಲವ ನಾಮಧಾರಿಗಳ ಬೇಡಿಕೆ ಈಡೇರಿಕೆಗಾಗಿ ಡಿ.10 ರಂದು ಒಂದು ದಿನದ ಉಪವಾಸ ಸತ್ಯಾಗ್ರಹವನ್ನು ಗಂಗಾವತಿಯಲ್ಲಿ ಬೆಳಿಗ್ಗೆ 10 ರಿಂದ ಸಂಜೆ 5ರವರೆಗೆ ಸ್ವಾಮಿಗಳ ನೇತೃತ್ವದಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ರಾಷ್ಟ್ರೀಯ ಈಡಿಗ ಮಹಾಮಂಡಳಿಯ ಚಿತ್ರದುರ್ಗ ಜಿಲ್ಲಾ ಅಧ್ಯಕ್ಷರಾದ ತಿಪ್ಪೇಸ್ವಾಮಿ ತಿಳಿಸಿದ್ದಾರೆ.

ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಬ್ರಹ್ಮಶ್ರೀ ನಾರಾಯಣ ಗುರು ಶಕ್ತಿ ಪೀಠ ಕರದಾಳ್ ರಾಷ್ಟ್ರೀಯ ಈಡಿಗ ಮಹಾಮಂಡಳಿ ಕರ್ನಾಟಕವತಿಯಿಂದ ರಾಜ್ಯ ಸರ್ಕಾರದ ಮುಂದೆ ಹಲವಾರು ಬೇಡಿಕೆಯನ್ನು ಇಡಲಾಗಿದೆ. ಇವುಗಳ ಈಡೇರಿಕೆಗಾಗಿ ಡಿ.10 ರಂದು ಉಪವಾಸ ಸತ್ಯಾಗ್ರಹವನ್ನು ಹಮ್ಮಿಕೊಳ್ಳಲಾಗಿದ್ದು ಇದರಲ್ಲಿ ಜನಾಂಗದ ಮುಖಂಡರು ಭಾಗವಹಿಸಲಿದ್ದಾರೆ.

ಹಿಂದಿನ ಸರ್ಕಾರ ಘೋಷಣೆ ಮಾಡಿದ ಬ್ರಹ್ಮಶ್ರೀ ನಾರಾಯಣ ಗುರು ಈಡಿಗ ಅಭಿವೃದ್ಧಿ ನಿಮಗಕ್ಕೆ ಕೂಡಲೇ 500 ಕೋಟಿ ರೂಗಳನ್ನು ಬಿಡುಗಡೆ ಮಾಡಬೇಕು, ಹಿಂದಿನ ಸರ್ಕಾರ ಈಡಿಗ ಸಮಾಜದ ಕುಲಶಾಸ್ತ್ರ ಅಧ್ಯಾಯನಕ್ಕಾಗಿ ಘೋಷಣೆ ಮಾಡಿದ 25 ಲಕ್ಷಗಳನ್ನು ಉಪಯೋಗಿಸಿ ಕೂಡಲೇ ಕುಲಶಾಸ್ತ್ರ ಅಧ್ಯಯನವನ್ನು ಮುಗಿಸಿ ನಮ್ಮ ಸಮಾಜವನ್ನು ಪರಿಶಿಷ್ಟ ಪಂಗಡಕ್ಕೆ ಸೇರಿಸುವುದಕ್ಕಾಗಿ (ಖ.ಖಿ) ಕೇಂದ್ರ ಸರ್ಕಾರಕ್ಕೆ ಶಿಫಾರಸು ಮಾಡಬೇಕು ಕುಲಕಸುಬು ಕಳೆದುಕೊಂಡ ಈ ಸಮಾಜಕ್ಕೆ (ಉತ್ತರ ಕಲ್ಯಾಣ ಕರ್ನಾಟಕ ಭಾಗ) ಮರಳಿ ಕಸುಬು ನೀಡುವುದು ಇಲ್ಲವಾದಲ್ಲಿ ಕಸುಬು ಕಳೆದುಕೊಂಡ ಪ್ರತಿ ಕುಟುಂಬಕ್ಕೂ ಎರಡು ಎಕರೆ ಜಮೀನನ್ನು ಮಂಜೂರು ಮಾಡಬೇಕು, ರಾಜ್ಯದಲ್ಲಿ ಈಡಿಗ ಬಿಲ್ಲವ ನಾಮಧಾರಿ ದೀವರ ಸಮಾಜದಲ್ಲಿ ಅತಿ ನಿರ್ಗತಿಕರಿಗೆ ಮನೆ ಹಾಗೂ ನಿವೇಶನಗಳಿಲ್ಲದ ಕುಟುಂಬಗಳಿಗೆ ಯಾವುದಾದರೂ ಯೋಜನೆ ಅಡಿಯಲ್ಲಿ 25,000 ಮನೆಗಳನ್ನು ಕೂಡಲೆ ಮಂಜೂರು ಮಾಡಿ ನೀಡಬೇಕು ಎಂದು ಆಗ್ರಹಿಸಲಾಯಿತು.

ಬ್ರಹ್ಮಶ್ರೀ ನಾರಾಯಣ ಗುರುಗಳ ಪುತ್ತಳಿಯನ್ನು ರಾಜ್ಯದ ರಾಜಧಾನಿಯಾದ ಬೆಂಗಳೂರು ನಗರದ ವಿಧಾನಸೌಧದ ಮುಂಭಾಗದಲ್ಲಿ ಮತ್ತು ರಾಜ್ಯದ ವಿಶ್ವವಿದ್ಯಾನಿಲಯದಲ್ಲಿ ಸ್ಥಾಪಿಸಬೇಕು, ನಮ್ಮ ಸಮುದಾಯದ ಶರಣರಾಗಿರುವ ಶ್ರೀ ಹೆಂಡದ ಮಾರಯ್ಯನ ಜಯಂತಿ ಸರ್ಕಾರ ಆಚರಿಸುವುದು.

ಶಿವಮೊಗ್ಗ ರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಹಾಗೂ ರಾಯಚೂರು ಜಿಲ್ಲೆಯ ದೇವದುರ್ಗ ತಾಲೂಕಿನ ಸಾವಿರಾರು ಎಕರೆ ಇರುವ ಕೆರೆಗೆ ದಿವಂಗತ ಬಂಗಾರಪ್ಪನವರ ಹೆಸರು ನೀಡಿ ಗೌರವ ಸಲ್ಲಿಸುವುದು.ಈಡಿಗ ಬಿಲ್ಲವ ನಾಮಧಾರಿ ದೀವರ ಸಮಾಜದ ಮಹಿಳೆಯರ ಸ್ವಯಂ ಉದ್ಯೋಗಕ್ಕಾಗಿ ಶೂನ್ಯ ಬಡ್ಡಿಯಲ್ಲಿ ಸರ್ಕಾರದಿಂದ ಸಾಲ ನೀಡುವಂತೆ ಒತ್ತಾಯಿಸಲಾಯಿತು.

ಉತ್ತರ ಕನ್ನಡ ಜಿಲ್ಲೆಯಲ್ಲಿ ಯುವಕರುಗಳಿಗೆ ಉನ್ನತ ಶಿಕ್ಷಣಕ್ಕಾಗಿ ಐಪಿಎಸ್ (ಖಕಖ) ಐಎಎಸ್ (ಖಂಖ) ಸರ್ಕಾರದಿಂದ ತರಬೇತಿ ಕೇಂದ್ರಗಳನ್ನು ಸ್ಥಾಪಿಸಬೇಕು, ಮಂಗಳೂರು ಉಡುಪಿ ಶಿವಮೊಗ್ಗ ಜಿಲ್ಲೆಗಳಲ್ಲಿ ನಮ್ಮ ಸಮಾಜಕ್ಕೆ ಗ್ರಾಮ ಪಂಚಾಯಿತಿಯಿಂದ ಹಿಡಿದು ಲೋಕಸಭೆಯವರಿಗೂ ಹೆಚ್ಚಿನ ರಾಜಕೀಯ ಪ್ರಾತಿನಿಧ್ಯ ನೀಡಬೇಕು, ಮಂಗಳೂರು ಜಿಲ್ಲೆಯ ಶ್ರೀ ಕೋಟಿ ಚೆನ್ನಯ್ಯ ದೇವಸ್ಥಾನಕ್ಕೆ 2016ರಲ್ಲಿ ಘೋಷಣೆ ಮಾಡಿದ ಸಂಪೂರ್ಣ ಹಣವನ್ನು ಕೂಡಲೆ ಬಿಡುಗಡೆ ಮಾಡಬೇಕು,ಸರ್ಕಾರಿ ಹುಲ್ಲುಗಾವಲು, ಗೋಮಾಳ, ಜಮೀನುಗಳಲ್ಲಿ ಸರ್ಕಾರಿ ವೆಚ್ಚದಲ್ಲಿ ಈಚಲು ಮರಗಳನ್ನು ಬೆಳೆಸುವುದು. ಹಾಗೂ ನೀರ ಮಾರಾಟಕ್ಕಾಗಿ ರಾಜ್ಯದ್ಯಂತರ ಒಂದು ನಿಗಮವನ್ನು ಸ್ಥಾಪಿಸುವುದು ಹಾಗೂ ಮಂಗಳೂರು ಉಡುಪಿ ಜಿಲ್ಲೆಗಳಲ್ಲಿ ಮುಂದುವರಿದ ಸೇಂದಿಯ ಕಸುಬನ್ನು ಸರಿಯಾದ ರೀತಿಯಲ್ಲಿ ಇಳಿಸಿ ಮಾರಾಟ ಮಾಡುವುದಕ್ಕೆ ವ್ಯವಸ್ಥೆಗಳನ್ನು ಕಲ್ಪಿಸುವಂತೆ ಮನವಿ ಮಾಡಲಾಯಿತು.

ಮಧ್ಯ ಮಾರಾಟದಲ್ಲಿ ನಮ್ಮ ಸಮಾಜಕ್ಕೆ ಶೇಕಡ 20 % ಮೀಸಲಾತಿ ನೀಡುವುದು. ನಮ್ಮ ಸಮಾಜದ ಅವಿದ್ಯವಂತರಾದ ಯುವ ಸಮೂಹಕ್ಕೆ ಸ್ವಯಂ ಉದ್ಯೋಗಕ್ಕಾಗಿ ಯೋಜನೆಗಳನ್ನು ರೂಪಿಸಬೇಕಿದೆ. ಒಂದು ವೇಳೆ ಸರ್ಕಾರ ನಿರ್ಲಕ್ಷಿಸಿದ್ದಲ್ಲಿ ಡಿಸೆಂಬರ್ 10ನೇ ತಾರೀಕು ಗಂಗಾವತಿಯಲ್ಲಿ ನಡೆಯುವ ಉಪವಾಸ ಸತ್ಯಾಗ್ರಹದಲ್ಲಿ ಮುಂದಿನ ಉಗ್ರ ಹೋರಾಟದ ಬಗ್ಗೆ ಸರ್ಕಾರಕ್ಕೆ ಎಚ್ಚರಿಕೆ ನೀಡಲಾಯಿತು.

ಪತ್ರಿಕಾಗೋಷ್ಠಿಯಲ್ಲಿ ಉಪಾಧ್ಯಕ್ಷರಾದ ಶ್ರೀನಿವಾಸ್ ರಮೇಶ್, ಸಂಘಟನಾ ಕಾರ್ಯದರ್ಶಿ ಮನು, ಮಹಿಳಾ ಜಿಲ್ಲಾ ಅಧ್ಯಕ್ಷರು ಉಮಾದೇವಿ, ಜಿಲ್ಲಾ ಕಾರ್ಯದರ್ಶಿ ಪ್ರಕಾಶ್ ಭಾಗವಹಿಸಿದ್ದರು

## ಗಣಿ ಬಾದಿತ ಪ್ರದೇಶಗಳಿಗೆ ಸೌಕರ್ಯ ಕಲ್ಪಿಸುವಲ್ಲಿ ಸರ್ಕಾರ ನಿರ್ಲಕ್ಷ್ಯ



» ಚಿತ್ರದುರ್ಗ

ಚಿತ್ರದುರ್ಗ ತಾಲ್ಲೂಕಿನ ಗಣಿ ಭಾಂಧಿತ ಪ್ರದೇಶಗಳಿಗೆ ಅಗತ್ಯವಾದ ಮೂಲಭೂತ ಸೌಕರ್ಯವನ್ನು ನೀಡುವಲ್ಲಿ ಸರ್ಕಾರ ಮತ್ತು ಚುನಾಯಿತ ಪ್ರತಿನಿಧಿಗಳು ನಿರ್ಲಕ್ಷ್ಯವಹಿಸಿದ್ದಾರೆ. ಗಣಿಯ ಡಿ.ಎಂ.ಎಫ್ ಹಣವನ್ನು ಗಣಿ ಭಾಧಿತ ಪ್ರದೇಶಗಳ ಅಭೀವೃದ್ದಿಗಾಗಿ ಬಳಕೆ ಮಾಡಬೇಕೆಂದು ನಿಯಮ ಇದ್ದರೂ ಸಹಾ ಅದನ್ನು ಸರಿಯಾಗಿ ಪಾಲಿಸುತ್ತಿಲ್ಲ ಎಂದು ಅಮ್ ಅದ್ಮಿ ಪಾರ್ಟಿಯ ಚಿತ್ರದುರ್ಗ ಜಿಲ್ಲಾಧ್ಯಕ್ಷರಾದ ಬಿ.ಇ.ಜಗದೀಶ್ ರವರು ಆಕ್ರೋಶವನ್ನು ವ್ಯಕ್ತಪಡಿಸಿದ್ದಾರೆ.

ಚಿತ್ರದುರ್ಗ ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಚಿತ್ರದುರ್ಗ ತಾಲ್ಲೂಕಿನ ಹಿರೇಗುಂಟನೂರು ಹೋಬಳಿಯ ಸುತ್ತ-ಮುತ್ತಲ್ಲ ಗ್ರಾಮಗಳಾದ ಭೀಮಸಮುದ್ರ ಹಿರೇಗುಂಟನೂರು, ಬೊಮ್ಮೇನಹಳ್ಳಿ, ವಿ.ಪಾಳ್ಯ, ಮೇಗಳಹಳ್ಳಿ, ಕಡ್ಲೆಗುದ್ದು ಈ ಗ್ರಾಮಗಳು ಗಣಿಯಾಡಿತ ಪ್ರದೇಶಗಳಾಗಿದ್ದು, ಈ ಗ್ರಾಮಗಳು ಸುಮಾರು 35-40 ವರ್ಷಗಳಿಂದ ಹಿಂದುಳಿದ ಗ್ರಾಮಗಳಾಗಿದ್ದು, ಇಲ್ಲಿ ಹೆಚ್ಚಾಗಿ ಕೂಲಿ ಕಾರ್ಮಿಕರು, ಬಡವರು ಹೆಚ್ಚಾಗಿ ವಾಸವಾಗಿದ್ದು, ಹಲವಾರು ರೋಗಗಳಿಗೆ ತುತ್ತಾಗಿರುತ್ತಾರೆ. ಹಾಗೂ ಈ ಗ್ರಾಮಗಳು ಮೂಲಭೂತ ಸೌಲಭ್ಯಗಳಿಂದ ವಂಚಿತವಾಗಿರುತ್ತವೆ ಎಂದು ಆರೋಪಿಸಿದರು. ಈ ಗ್ರಾಮಗಳಿಗೆ ಸೌಲಭ್ಯಗಳಾದ ಕುಡಿಯುವ ನೀರು, ಚರಂಡಿ, ರಸ್ತೆ, ಹೈಟೆಕ್ ಆಸ್ಪತ್ರೆ, ಜೈಟೆಕ್ ಶಾಲಾ ಕಟ್ಟಡ, ಶಾಲಾ ಮಕ್ಕಳಿಗೆ ಉನ್ನತ ವಿದ್ಯಾಭ್ಯಾಸಕ್ಕೆ ಡಿ.ಎಂ.ಎಫ್. ಫಂಡ್ ಹಣವನ್ನು ಈ ಗ್ರಾಮಗಳಿಗೆ ಉಪಯೋಗಿಸಬೇಕಿದೆ ಆದರೆ ಸರ್ಕಾರ ಮತ್ತು ಚುನಾಯಿತ ಪ್ರತಿನಿಧಿಗಳು ಇದರ ಬಗ್ಗೆ ತಾತ್ಸರಾ ಮನೋಭಾವ ಮಾಡುತ್ತಾ ತಮಗೆ ಬೇಕಾದ ರೀತಿಯಲ್ಲಿ ಹಣವನ್ನು ವ್ಯಯ ಮಾಡುತ್ತಿದ್ದಾರೆ ಇದರ ಬಗ್ಗೆ ಅಮ್ ಆದ್ಮಿ ಪಾರ್ಟಿ ಹೋರಾಟವನ್ನು ನಡೆಸಲಿದೆ ಎಂದರು.

ಈ ಗ್ರಾಮಗಳಲ್ಲಿ ಸರಿಯಾದ ರೀತಿಯಲ್ಲಿ ಆಸ್ಪತ್ರೆಗಳಿಲ್ಲ ಇದ್ದರೂ ಸಹಾ ಸರಿಯಾದ ರೀತಿಯ ಸೌಲಭ್ಯಗಳಿಲ್ಲ ಚಿಕಿತ್ಸೆಗಾಗಿ ದೂರ ಚಿತ್ರದುರ್ಗ ಇಲ್ಲವೇ ದಾವಣಗೆರೆಗೆ ಹೋಗಬೇಕಾದ ಅನಿವಾರ್ಯತೆ ಇದೆ ಇದರ ಬದಲಾಗಿ ಈ ಗ್ರಾಮಗಳಲ್ಲಿ ಹೈಟೆಕ್ ಆಸ್ಪತ್ರೆಯನ್ನು ನಿರ್ಮಾಣ ಮಾಡಿ ಸೌಲಭ್ಯವನ್ನು ನೀಡಿದರೆ ಜನತೆಗೆ ಅನುಕೂಲವಾಗಲಿದೆ ಎಂದ ಅವರು ಇದೇ ರೀತಿ ಸರ್ಕಾರಿ ಶಾಲೆಗಳ ಸ್ಥಿತಿಯೂ ಸಹಾ ಚಿಂತಾಜನಕವಾಗಿದೆ ಅಲ್ಲಿನ ಮಕ್ಕಳಿಗೆ ಸರಿಯಾದ ರೀತಿಯಲ್ಲಿ ಸೌಲಭ್ಯಗಳು ಸಿಗುತ್ತಿಲ್ಲ, ಹಲವಾರು ಬಾರಿ ನಾನು ಮತ್ತು ಇತರರು ಮಕ್ಕಳಿಗೆ ವಿವಿಧ ರೀತಿಯ ಸಹಾಯವನ್ನು ಮಾಡಲಾಗಿದೆ.

## ಪ್ರಮುಖ ಸುದ್ದಿ

# ರೈತರ ಪರಿಹಾರದ ಧನ ಸಾಲಕ್ಕೆ ಜಮಾ ಮಾಡುವ ಬ್ಯಾಂಕ್ ಅಧಿಕಾರಿಗಳ ವಿರುದ್ದ ರೈತ ಸಂಘ ಆಕ್ರೋಶ

» ಚಳ್ಳಕೆರೆ



ಸರ್ಕಾರದಿಂದ ರೈತರಿಗೆ ಬರುವ ಸಾಮಾಜಿಕ ಭದ್ರತೆ ಹಣ, ಪರಿಹಾರದ ಹಣವನ್ನು ಕೆಲವೊಂದು ಬ್ಯಾಂಕ್ ವ್ಯವಸ್ಥಾಪಕರು ರೈತರ ಖಾತೆಗೆ ಜಮಾ ಮಾಡದೆ ರೈತರು ಮಾಡಿದ ಸಾಲಕ್ಕೆ ಜಮಾ ಮಾಡಿಕೊಳ್ಳುತ್ತಿರುವುದನ್ನು ವಿರೋಧಿಸಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ(ಪ್ರೊ.ಬಣ) ತಾಲ್ಲೂಕು ಕಚೇರಿ ಮುಂದೆ ಪ್ರತಿಭಟನೆ ನಡೆಸಿ ತಹಶೀಲ್ದಾರ್‌ಗೆ ಮನವಿ ನೀಡಲಾಯಿತು.

ಪ್ರತಿಭಟನೆಯ ನೇತೃತ್ವ ವಹಿಸಿದ್ದ ರಾಜ್ಯ ಉಪಾಧ್ಯಕ್ಷ ರೆಡ್ಡಿಹಳ್ಳಿ ವೀರಣ್ಣ ಮಾತನಾಡಿ, ಸರ್ಕಾರ ಈಗಾಗಲೇ ಈ ತಾಲ್ಲೂಕನ್ನು ಬರಗಾಲ ಪೀಡಿತ ಪ್ರದೇಶವೆಂದು ಘೋಷಣೆ ಮಾಡಿದೆ. ರೈತರಿಂದ ಯಾವುದೇ ಸಾಲ ವಸೂಲು ಮಾಡುವುದು ಕಾನೂನು ಬಾಹಿರವಾಗುತ್ತದೆ. ಈ ಬಗ್ಗೆ ಈಗಾಗಲೇ ಬ್ಯಾಂಕ್‌ನ ಅಧಿಕಾರಿಗಳಿಗೆ ಮೌಖಿಕ ಆದೇಶ ನೀಡಿದ್ದರೂ ಸಹ ರೈತರ ಪರಿಹಾರ ದನ ಸರ್ಕಾರದ ಸಾಮಾಜಿಕ ಸೇವಾ ಭದ್ರತೆ ಹಣ, ಪರಿಹಾರ ಹಣ ಮುಂತಾದವುಗಳನ್ನು ಬ್ಯಾಂಕ್ ವ್ಯವಸ್ಥಾಪಕರು ಮಾಹಿತಿ ನೀಡದೆ ಸಾಲಗಳಿಗೆ ಜಮಾ ಮಾಡಿಕೊಳ್ಳುತ್ತಿದ್ದು, ಇದರಿಂದ ರೈತರಿಗೆ ತೊಂದರೆಯಾಗುತ್ತಿದೆ. ಈ ಕೂಡಲೇ ಜಿಲ್ಲಾಡಳಿತ ಸಂಬಂಧಪಟ್ಟ ಬ್ಯಾಂಕ್ ಅಧಿಕಾರಿಗಳಿಗೆ ಯಾವುದೇ ಹಣವನ್ನು ರೈತರ ಸಾಲಕ್ಕೆ ಜಮಾಮಾಡಿಕೊಳ್ಳದಂತೆ ನಿರ್ದೇಶನ ನೀಡಬೇಕೆಂದು ಒತ್ತಾಯಿಸಿದರು.

ಮನವಿ ಸ್ವೀಕರಿಸಿ ಮಾತನಾಡಿದ ತಹಶೀಲ್ದಾರ್ ರೇಹಾನ್ ಪಾಷ, ಬರಗಾಲ ಪೀಡತ ಪ್ರದೇಶ ಘೋಷಣೆಯಾಗಿ ಈಗಾಗಲೇ ಎರಡು ತಿಂಗಳು ಕಳೆದಿದ್ದು, ರೈತರ ಯಾವುದೇ ಸಾಲವನ್ನು ವಸೂಲಿ ಮಾಡಬಾರದು ಎಂದು ಸರ್ಕಾರ ನಿರ್ದೇಶನ ನೀಡಿದೆ. ಆದರೆ, ಕೆಲವೊಂದು ಬ್ಯಾಂಕ್‌ಗಳು ಸಾಲ ವಸೂಲಾತಿ ಪ್ರಕ್ರಿಯೆಯಲ್ಲಿ ತೊಡಗಿದ್ದು ಅವರನ್ನು ಪತ್ತೆ ಮಾಡಿ ರೈತ ಸಾಲಕ್ಕೆ ಯಾವುದೇ ಹಣ ಜಮಾ ಮಾಡಿಕೊಳ್ಳದಂತೆ ಜಿಲ್ಲಾಧಿಕಾರಿಗಳ ಮೂಲಕ ನಿರ್ದೇಶನ ನೀಡಲಾಗುವುದು ಎಂದರು.

ತಾಲ್ಲೂಕು ಅಧ್ಯಕ್ಷ ಶ್ರೀಕಂಠಮೂರ್ತಿ, ಹಿರೇಹಳ್ಳಿಯರ್ರಿಸ್ವಾಮಿ, ಜಿ.ಎಚ್. ಹನುಮಂತಯ್ಯ, ಮೈರಾಡ ಚಂದ್ರಣ್ಣ, ರಾಜಣ್ಣ, ವರವುತಿಪ್ಪೇಸ್ವಾಮಿ, ತಿಪ್ಪಾರೆಡ್ಡಿ, ಮಂಜುನಾಥ ಮುಂತಾದವರು ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ಚಿತ್ರದುರ್ಗ, ದಾವಣಗೆರೆ ಜಿಲ್ಲೆಗಳಲ್ಲಿ ಮೆಕ್ಕೆಜೋಳ ಖರೀದಿ ಕೇಂದ್ರ

» ಚಿತ್ರದುರ್ಗ

ರಾಜ್ಯ ಸರ್ಕಾರದ ಅಧಿಸೂಚನೆಯನ್ವಯ ಮೆಕ್ಕೆಜೋಳ ಬೆಳೆದ ರೈತರಿಗೆ ನೆರವಾಗಲು, ಕರ್ನಾಟಕ ಹಾಲು ಮಹಾಮಂಡಳಿಯು ರೈತರಿಂದ ಮೆಕ್ಕೆಜೋಳವನ್ನು ನೇರವಾಗಿ ಪ್ರತಿ ಕ್ವಿಂಟಾಲ್‌ಗೆ ರೂ.2250/- ಬೆಲೆಯಲ್ಲಿ ಖರೀದಿಸಲು ಕ್ರಮಕೈಗೊಂಡಿದೆ.

ಮೆಕ್ಕೆಜೋಳ ಬೆಳೆದಿರುವ ಆಸಕ್ತ ರೈತರು ಸಮೀಪದ ಹಾಲು ಉತ್ಪಾದಕರ ಸಹಕಾರ ಸಂಘಗಳಲ್ಲಿ ಒಂದು ಕೆ.ಜಿ. ಪ್ರಮಾಣದಷ್ಟು ಮೆಕ್ಕೆಜೋಳದ ಮಾದರಿ ನೀಡಿ, ಫ್ರೂಟ್ಸ್ ತಂತ್ರಾಂಶದಲ್ಲಿ ನೊಂದಾವಣೆಯಾಗಿರುವ ಸಂಖ್ಯೆಯೊಂದಿಗೆ ನೊಂದಾಯಿಸಿಕೊಳ್ಳಬಹುದಾಗಿದೆ. ನೊಂದಣೆ ಪ್ರಕ್ರಿಯೆಯು ಈಗಾಗಲೇ ನ.13 ರಿಂದ ಪ್ರಾರಂಭವಾಗಿದ್ದು, ದಾವಣಗೆರೆ ಹಾಗೂ ಚಿತ್ರದುರ್ಗ ಜಿಲ್ಲಾ ವ್ಯಾಪ್ತಿಯ ರೈತರಿಗೆ ಸಾಗಾಣಿಕಾ ವೆಚ್ಚದ ಹೊರೆಯನ್ನು ತಗ್ಗಿಸುವ ಸಲುವಾಗಿ, ಮಹಾಮಂಡಳವು ದಾವಣಗೆರೆ ಹಾಗೂ ಚಿತ್ರದುರ್ಗ ಜಿಲ್ಲೆಗಳಲ್ಲಿ ಮೆಕ್ಕೆಜೋಳ ಖರೀದಿ ಕೇಂದ್ರಗಳನ್ನು ತೆರೆದಿರುತ್ತದೆ. ಪ್ರಾಥಮಿಕ ಹಾಲು ಉತ್ಪಾದಕರ ಸಹಕಾರ ಸಂಘಗಳಲ್ಲಿ ಪ್ರಸ್ತುತ ಬಳಕೆ ಮಾಡುತ್ತಿರುವ ಕ್ಷೀರಸಿರಿ ಮತ್ತು ಸರಕಾರದ ಕೃಷಿ ಇಲಾಖೆ ಸಿದ್ಧಪಡಿಸಿರುವ ತಂತ್ರಾಂಶದ ಮೂಲಕ ಮೆಕ್ಕೆಜೋಳ ಖರೀದಿ ಪ್ರಕ್ರಿಯೆಯನ್ನು ಅನುಷ್ಠಾನಕ್ಕೆ ತರುತ್ತಿದೆ. ಪ್ರತಿ ಒಬ್ಬ ರೈತರಿಂದ ಗರಿಷ್ಠ 1000 ಕ್ವಿಂಟಾಲ್ ಮೆಕ್ಕೆಜೋಳ ಸರಬರಾಜಿಗೆ ಸೀಮಿತಗೊಳಿಸಿದ್ದು, ದಾವಣಗೆರೆ ಜಿಲ್ಲೆಗೆ ಸಂಬಂಧಿಸಿದಂತೆ, ಹೆಚ್ಚಿನ ಮಾಹಿತಿಗಾಗಿ ಆಸಕ್ತ ರೈತರು ಡಾ. ಎಸ್.ಎಂ.ಮೂರ್ತಿ, ವ್ಯವಸ್ಥಾಪಕರು (ಶೇಮತಾಂ) –7760980540 ಇವರನ್ನು ಹಾಗೂ ಚಿತ್ರದುರ್ಗ ಜಿಲ್ಲಾ ವ್ಯಾಪ್ತಿಗೆ ಸಂಬಂಧಪಟ್ಟಂತೆ ಡಾ.ಸಂಜಯ್.ಕೆ.ಪಿ (ಉಪ ವ್ಯವಸ್ಥಾಪಕರು, ಶೇಖರಣೆ) 8971435116 ಇವರನ್ನು ಸಂಪರ್ಕಿಸಬಹುದು ಎಂದು ಕರ್ನಾಟಕ ಸಹಕಾರಿ ಹಾಲು ಉತ್ಪಾದಕರ ಮಹಾಮಂಡಳಿ ಪ್ರಕಟಣೆ ತಿಳಿಸಿದೆ.

### ಡಿ.8ರಂದು ಬಹಿರಂಗ ಹರಾಜು

» ಚಿತ್ರದುರ್ಗ

ಚಿತ್ರದುರ್ಗ ನಗರದ ಒನಕೆ ಓಬವ್ವ ಸ್ಟೇಡಿಯಂ ರಸ್ತೆಯಲ್ಲಿರುವ ಶಿಕ್ಷಕರ ಸರ್ಕಾರಿ ಶಿಕ್ಷಣ ಮಹಾವಿದ್ಯಾಲಯ ಕಚೇರಿ ಕಾಂಪೌಂಡಿನಲ್ಲಿರುವ ಕಟ್ಟಡಕ್ಕೆ ಹಾನಿ ಉಂಟುಮಾಡುವ ನಾಟಗೆ ಯೋಗ್ಯವಾಗಿಲ್ಲದ, ಒಣಗಿದ 8 ಮರಗಳನ್ನು ಕಡಿದು ಸ್ವಚ್ಛಗೊಳಿಸಲು ಡಿಸೆಂಬರ್ 8ರಂದು ಮಧ್ಯಾಹ್ನ 3ಕ್ಕೆ ಬಹಿರಂಗ ಹರಾಜು ಪ್ರಕ್ರಿಯೆ ನಿಗಧಿಪಡಿಸಲಾಗಿದೆ. ಟಿಂಬರ್ ಮರ್ಚೆಂಟ್ಸ್ ಹಾಗೂ ಆಸಕ್ತ ಸಾರ್ವಜನಿಕರು ಹರಾಜು ಪ್ರಕ್ರಿಯೆಯಲ್ಲಿ ಭಾಗವಹಿಸಬಹುದು.ಹರಾಜಿನಲ್ಲಿ ಭಾಗವಹಿಸುವ ಬಿಡ್‌ದಾರರು ಇಎಂಡಿ ಹಣದ ಶೇ.25 ರಷ್ಟು ರೂಗಳನ್ನು ಪ್ರಾಂಶುಪಾಲರು ಹಾಗೂ ಪದನಿಮಿತ್ತ ಸಹ ನಿರ್ದೇಶಕರು ಜಿ.ಸಿ.ಟಿ.ಇ ಚಿತ್ರದುರ್ಗ ಇವರ ಹೆಸರಿಗೆ ಡಿಡಿ/ ಚೆಕ್ ಮೂಲಕ ಹರಾಜು ದಿನದಂದು ಹರಾಜು ಪ್ರಕ್ರಿಯೆ ಮೊದಲು ಪಾವತಿಸಬೇಕು. ಇ.ಎಂ.ಡಿ ಹಣ ಪಾವತಿಸದಿರುವ ಬಿಡ್‌ದಾರರು ಬಹಿರಂಗ ಹರಾಜಿನಲ್ಲಿ ಭಾಗವಹಿಸಲು ಅವಕಾಶವಿಲ್ಲ. ಬಹಿರಂಗ ಹರಾಜು ಪ್ರಕ್ರಿಯೆ ನಿಬಂಧನೆಗಳು ಹಾಗೂ ಹೆಚ್ಚಿನ ಮಾಹಿತಿಗಾಗಿ ಚಿತ್ರದುರ್ಗ ನಗರದ ಒನಕೆ ಓಬವ್ವ ಸ್ಟೇಡಿಯಂ ರಸ್ತೆಯ ಶಿಕ್ಷಕರ ಸರ್ಕಾರಿ ಶಿಕ್ಷಣ ಮಹಾವಿದ್ಯಾಲಯ ಕಚೇರಿಯನ್ನು ಸಂಪರ್ಕಿಸಬಹುದು ಪ್ರಕಟಣೆ ತಿಳಿಸಿದೆ.

# ಕೀರ್ತನೆಗಳ ಮೂಲಕ ಸಮಾನತೆ ಸಾರಿದ ಕನಕ

» ದಾವಣಗೆರೆ

ದಾಸಶ್ರೇಷ್ಠ ಕನಕದಾಸರು ಯಾವುದೇ ಹೋರಾಟ ಮಾಡದೇ ಕೇವಲ ತಮ್ಮ ಕೀರ್ತನೆಗಳ ಮುಖಾಂತರ ಸಮಾಜದ ಬದಲಾವಣೆಗೆ ಶ್ರಮಿಸಿದರು ಎಂದು ಮಾಯಕೊಂಡ ಶಾಸಕ ಬಸವಂತಪ್ಪ.ಕೆ ತಿಳಿಸಿದರು.

ಜಿಲ್ಲಾಡಳಿತ,ಜಿಲ್ಲಾ ಪಂಚಾಯತ್,ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಮಹಾನಗರ ಪಾಲಿಕೆ ಇವರ ಸಂಯುಕ್ತಾಶ್ರದಲ್ಲಿ ಏರ್ಪಡಿಸದ್ದ ಪಿ.ಬಿ ರಸ್ತೆಯಲ್ಲಿರುವ ಶ್ರೀ ಬೀರಲಿಂಗೇಶ್ವರ ದೇವಸ್ಥಾನ ಆವರಣದಲ್ಲಿ ನಡೆದ ದಾಸಶ್ರೇಷ್ಠ ಸಂತ ಶ್ರೀಕನಕದಾಸರ ಜಯಂತ್ಯೋತ್ಸವ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

12ನೇ ಶತಮಾನದ ಬಸವಣ್ಣ, 16ನೇ ಶತಮಾನದ ಕನಕದಾಸರು ಇನ್ನೂ ಅನೇಕ ದಾರ್ಶನಿಕರು ಕನ್ನಡ ನಾಡಿನಲ್ಲಿ ತಮ್ಮದೇ ಆದಂತಹ ಛಾಪನ್ನು ಮೂಡಿಸಿದ್ದಾರೆ. ಇವರೆಲ್ಲ ಸಮಾನತೆಗಾಗಿ ಯಾವುದೇ ರೀತಿಯ ಹೋರಾಟವನ್ನು ಮಾಡಲಿಲ್ಲ ಕೇವಲ ವಚನ, ಸಾಹಿತ್ಯ, ಕೀರ್ತನೆಗಳ ಮೂಲಕ ಸಮಾಜದ ಅಂಕು ಡೊಂಕನ್ನು ತಿದ್ದುವ ಮೂಲಕ, ಸಮ ಸಮಾಜದ ನಿರ್ಮಾಣಕ್ಕೆ ಹಾಗೂ ಸಮಾಜದಲ್ಲಿ ಉತ್ತಮವಾಗಿ ಬದುಕನ್ನು ಕಟ್ಟಿಕೊಳ್ಳುವ ಮಾರ್ಗವನ್ನು ತಿಳಿಸಿಕೊಟ್ಟಿದ್ದಾರೆ.



ಹಗರಿಬೊಮ್ಮನಹಳ್ಳಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಪ್ರಾಂಶುಪಾಲರಾದ ಡಾ. ವೆಂಕಟೇಶ್.ಕೆ ಮಾತನಾಡಿ ಶೂದ್ರ ಮತ್ತು ದಲಿತ ಪರಂಪರೆಗೆ ಒಂದು ದೀರ್ಘವಾದ ಚರಿತ್ರೆಯಿದೆ. ಸಂತ ಕನಕದಾಸರು ಸಮಾಜದ ಎಲ್ಲಾ ವರ್ಗದವರಿಗೆ ಒಂದು ನಿಧಿಯಂತೆ ದೊರಕಿದ್ದಾರೆ. 16ನೇ ಶತಮಾನದಲ್ಲಿ ನಡೆದ ದಾಸ ಚಳುವಳಿಗೆ ಒಂದು ವಿಶೇಷವಾದ ಮಹತ್ವ ದೊರಕಿದ್ದು ಕನಕದಾಸರ ಪ್ರವೇಶದಿಂದ. ಈ ಶತಮಾನದಲ್ಲಿ ಕನಕದಾಸರನ್ನು ಹೊರತುಪಡಿಸಿ ಮಿಕ್ಕುಳಿದ ಎಲ್ಲಾ ದಾಸರು ಮೇಲ್ವರ್ಗಕ್ಕೆ ಸೇರಿದವರೇ ಆಗಿದ್ದು, ಇವರೆಲ್ಲರು ಕೇವಲ ಭಕ್ತಿ, ಆಧ್ಯಾತ್ಮ, ಆತ್ಮ ಸಾಕ್ಷಾತ್ಕಾರಕ್ಕೆ ಆಧ್ಯತೆ ನೀಡುತ್ತಿದ್ದರು. ಆದರೆ ಕನಕದಾಸರು ದುಡಿಯುವ ಹಾಗೂ ಶೋಷಿತ ವರ್ಗವನ್ನು ಪ್ರತಿನಿಧಿಸಿದಂತಹ ಏಕೈಕ ವ್ಯಕ್ತಿಯಾಗಿದ್ದಾರೆ. ವೈದಿಕರ ಆವರಣವನ್ನು ಪ್ರವೇಶಿಸಿದ ಏಕೈಕ ಶೂದ್ರ ಸಂತ ಕನಕದಾಸರು. ವ್ಯಾಸರಾಯರು ಜಾತಿಯ ಕಾರಣಕ್ಕಾಗಿ ಕನಕದಾಸರನ್ನು ಶಿಷ್ಯನನ್ನಾಗಿ ಸ್ವೀಕರಿಸಲು ಹಿಂದೇಟು ಹಾಕಿದ್ದರು. ನಂತರ ಕನಕದಾಸರ ಶಕ್ತಿ, ಜ್ಞಾನ ಹಾಗೂ ಪ್ರತಿಭೆಯನ್ನು ಗಮನಿಸಿ ಕೇಳಿದಿರಾ ಕನಕನಾಡುವ ಮಾತುಗಳ ಮಾಡಲ್ಲ, ಹುಡುಕಿದರೂ ನಿನಗೆ ಈಡಾರು ಎಂಬ ಮಾತುಗಳನ್ನು ಸ್ವತಃ ವ್ಯಾಸರಾಯರೇ ಹೇಳುತ್ತಾರೆ. ಕನಕದಾಸರನ್ನು ಸಂತರನ್ನಾಗಿ, ಭಕ್ತರನ್ನಾಗಿ, ದಾಸರನ್ನಾಗಿ ನೋಡುತ್ತೇವೆ ಆದರೆ ಅವರು ಒಬ್ಬ ಸಮಾಜ ಸೇವಕರಾಗಿದ್ದಾರೆ, ಸಮಾನತೆ ಪ್ರತಿಪಾದಿಸುವ ಮೂಲಕ ಸಮಾಜಕ್ಕೆ ತಮ್ಮದೇ ಆದ ಕೊಡುಗೆ ನೀಡಿದ್ದಾರೆ ಎಂದರು. ಸನ್ಮಾನ: ಮಹಾನಗರ ಪಾಲಿಕೆ ವಿಪಕ್ಷ ನಾಯಕ ಪ್ರಸನ್ನ ಕುಮಾರ್.ಕೆ, ಅಂತರಾಷ್ಟ್ರೀಯ ಕ್ರೀಡಾಪಟುಗಳಾದ ಜೆ.ಎನ್ ಶ್ರೀನಿವಾಸ್ ಮತ್ತು ಅಣ್ಣಪ್ಪ ಕೆ.ಹೆಚ್, ರಾಷ್ಟ್ರೀಯ ಕರಾಟೆ ವಿಭೂಷಣ ಪ್ರಶಸ್ತಿ ವಿಜೇತ ಹಾಗೂ ಕರಾಟೆ ಕ್ರೀಡಾಪಟು ಕಾರ್ತಿಕ್.ಸಿ ಅಗಡಿ, ಅಂತರಾಷ್ಟ್ರೀಯ ವೇಟ್ ಲಿಫ್ಟರ್ ಕ್ರೀಡಾಪಟು ಸಾಯಿನಾಥ್ ಕೆ.ಎಸ್, ಸಮಾಜ ಸೇವಕರಾದ ಬಾಬುರಾವ್.ಎಸ್ ಮತ್ತು ಚಂದ್ರಶೇಖರ್ ಯಶವಂತ್ ಮತ್ತು ರೂಪಶ್ರೀ ಕೆ.ಆರ್.ಉಮೇಶ್ ಇವರನ್ನು ಸನ್ಮಾನಿಸಲಾಯಿತು. ಅಪರ ಜಿಲ್ಲಾಧಿಕಾರಿ ಪಿ.ಎನ್ ಲೋಕೇಶ್, ಹೆಚ್ಚುವರಿ ಪೋಲಿಸ್ ವರಿಷ್ಠಾಧಿಕಾರಿ ವಿಜಯಕುಮಾರ್ ಸಂತೋಷ್, ದಾಸಶ್ರೇಷ್ಠ ಶ್ರೀ ಕನಕದಾಸರು ಹಾಗೂ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಜಿಲ್ಲಾ ಹೋರಾಟ ಸಮಿತಿ(ರಿ)ಯ ಅಧ್ಯಕ್ಷ ರಮೇಶ್.ಬಿ, ಸಮಾಜದ ಗುರು ಶಿವಕುಮಾರ್ ಒಡೆಯರ್, ಇನ್ಸೈಟ್ ಸಂಸ್ಥೆಯ ಸಂಸ್ಥಾಪಕ ವಿನಯ್‌ಕುಮಾರ್ ಗೌಡ್ರ ಚನ್ನಬಸಪ್ಪ ಉಪಸ್ಥಿತರಿದ್ದರು.

### ವಿಶ್ವ ಏಡ್ಸ್ ದಿನದ ಕಾರ್ಯಕ್ರಮದಲ್ಲಿ ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ಎಸ್.ಪಿ.ರವೀಂದ್ರ

# ಏಡ್ಸ್‌ಗೆ ಮುಂಜಾಗ್ರತೆಯೇ ಮದ್ದು

» ಚಿತ್ರದುರ್ಗ

ಸಾಮಾಜಿಕ ಪಿಡುಗಾಗಿರುವ ಏಡ್ಸ್ ಕಾಯಿಲೆಯನ್ನು ಮುಂಜಾಗ್ರತೆ ಹಾಗೂ ಉತ್ತಮ ಜೀವನಶೈಲಿಯಿಂದ ಮಾತ್ರ ಏಡ್ಸ್‌ನ್ನು ತಡೆಗಟ್ಟಲು ಸಾಧ್ಯ ಎಂದು ಜಿಲ್ಲಾ ಆಸ್ಪತ್ರೆಯ ಜಿಲ್ಲಾ ಶಸ್ತ್ರ ಚಿಕಿತ್ಸಕ ಡಾ.ಎಸ್.ಪಿ.ರವೀಂದ್ರ ಹೇಳಿದರು.

ಚಿತ್ರದುರ್ಗ ತಾಲ್ಲೂಕಿನ ಜಿ.ಆರ್.ಹಳ್ಳಿಯ ಜ್ಞಾನಗಂಗೋತ್ರಿ ಸ್ನಾತಕೋತ್ತರ ಕೇಂದ್ರದಲ್ಲಿ ಶುಕ್ರವಾರ ಜಿಲ್ಲಾಡಳಿತ,ಜಿಲ್ಲಾ ಪಂಚಾಯಿತಿ,ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಏಡ್ಸ್ ನಿಯಂತ್ರಣ ಮತ್ತು ತಡೆ ಘಟಕ, ಚಿತ್ರದುರ್ಗ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಸಂಶೋಧನಾ ಸಂಸ್ಥೆ, ದಾವಣಗೆರೆ ವಿಶ್ವವಿದ್ಯಾನಿಲಯಜ್ಞಾನಗಂಗೋತ್ರಿಸ್ನಾತಕೋತ್ತರ ಕೇಂದ್ರ, ತಾಲ್ಲೂಕು ಆರೋಗ್ಯಾಧಿಕಾರಿ ಕಚೇರಿ, ವಿವಿಧ ಸಂಘ ಸಂಸ್ಥೆಗಳ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ವಿಶ್ವ ಏಡ್ಸ್ ದಿನ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಮುಂಜಾಗ್ರತೆ ವಹಿಸಿದಲ್ಲಿ ಎಚ್‌ಐವಿ-ಏಡ್ಸ್ ರೋಗ ಹರಡದಂತೆ ನಿಯಂತ್ರಿಸಬಹುದು. ಹೆಚ್‌ಐವಿ ಕಾಯಿಲೆಗೆ ಸಂಬಂಧಪಟ್ಟಂತೆ ಲಸಿಕೆ ಸಂಶೋಧನೆಗಳು ನಡೆಯುತ್ತಿದೆ ಎಂದು ಹೇಳಿದರು. ಎಚ್‌ಐವಿ ಮನುಷ್ಯನ ರೋಗ ನಿರೋಧಕ ಶಕ್ತಿಯನ್ನು ಕಡಿಮೆ ಮಾಡುವ ವೈರಾಣು. ಈ ವೈರಾಣು ನಮ್ಮ ದೇಹದ ರೋಗ ನಿರೋಧಕ ಶಕ್ತಿಯನ್ನು ಕಡಿಮೆ ಮಾಡುತ್ತಾ ಹೋಗುತ್ತದೆ. ಹೀಗೆ ಹಲವು ರೋಗಗಳಿಗೆ ಒಳಗಾಗುವ ಸ್ಥಿತಿಯನ್ನು ಏಡ್ಸ್ ಎಂದು ಕರೆಯುತ್ತೇವೆ. ಎಚ್‌ಐವಿ ಸೋಂಕು ಅಸುರಕ್ಷಿತ ಲೈಂಗಿಕ ಸಂಬಂಧದ ಮೂಲಕ, ಎಚ್‌ಐವಿ ಸೋಂಕಿತ ರಕ್ತವನ್ನು ಪರೀಕ್ಷೆ ಮಾಡದೇ ಪಡೆಯುವುದರಿಂದ, ಎಚ್‌ಐವಿ ಸೋಂಕಿತ ತಾಯಿಯಿಂದ ಮಗುವಿಗೆ ಗರ್ಭಾವಸ್ಥೆಯಲ್ಲಿ, ಹೆರಿಗೆ ಸಮಯದಲ್ಲಿ ಅಥವಾ ಎದೆ ಹಾಲಿನ ಮೂಲಕ, ಎಚ್‌ಐವಿ ಸೋಂಕಿತ ಸೂಜಿ, ಸಿರಿಂಜು, ಹರಿತವಾದ ಸಲಕರಣೆಗಳನ್ನು ಸಂಸ್ಕರಿಸದೇ ಬಳಸುವುರಿಂದ ಎಚ್‌ಐವಿ ಸೋಂಕು ಹರಡುತ್ತದೆ. ಹಾಗಾಗಿ ಬಹಳ ಎಚ್ಚರಿಕೆಯಿಂದ ಇರಬೇಕು.



ಜಿಲ್ಲಾ ಆರ್‌ಸಿಹೆಚ್ ಅಧಿಕಾರಿ ಡಾ.ಅಭಿನವ್ ಮಾತನಾಡಿ, ಎಚ್‌ಐವಿ ಸೋಂಕು ಕೇವಲ ನಾಲ್ಕು ವಿಧಾನಗಳಲ್ಲಿ ಮಾತ್ರ ಹರಡುತ್ತದೆ. ಮುಂಜಾಗ್ರತೆಯಿಂದ ಮಾತ್ರ ಏಡ್ಸ್ ತಡೆಗಟ್ಟಲು ಸಾಧ್ಯ. ಎಚ್‌ಐವಿ ಸೋಂಕು ಕುರಿತು ಈಗಾಗಲೇ ಜನರಿಗೆ ಸಾಕಷ್ಟು ಮಾಹಿತಿ ಇದೆ. ಆದರೆ ಅದನ್ನು ಸಮರ್ಪಕವಾಗಿ ಅನುಷ್ಠಾನಕ್ಕೆ ತರಬೇಕು ಎಂದು ಸಲಹೆ ನೀಡಿದರು.

ಜಿಲ್ಲಾ ಏಡ್ಸ್ ನಿಯಂತ್ರಣ ಮತ್ತು ತಡೆ ಘಟಕದ ಜಿಲ್ಲಾ ಕಾರ್ಯಕ್ರಮಾಧಿಕಾರಿ ಡಾ.ಸಿ.ಓ.ಸುಧಾ ಮಾತನಾಡಿ, ಏಡ್ಸ್ ಕಾಯಿಲೆಯಿಂದ ಮರಣ ಹೊಂದಿದವರ ಸ್ಮರಣಾರ್ಥವಾಗಿ ಹಾಗೂ ಪ್ರತಿಯೊಬ್ಬರಿಗೂ ಎಚ್‌ಐವಿ-ಏಡ್ಸ್ ಬಗ್ಗೆ ಅರಿವು ಮೂಡಿಸುವ ಸಲುವಾಗಿ ಪ್ರತಿವರ್ಷವೂ ಡಿಸೆಂಬರ್ 1ರಂದು ವಿಶ್ವ ಏಡ್ಸ್ ದಿನ ಆಚರಿಸಲಾಗುತ್ತಿದೆ ಎಂದರು.

ಎಚ್‌ಐವಿ-ಏಡ್ಸ್‌ಗೆ ಇಲ್ಲಿಯವರೆಗೂ ವ್ಯಾಕ್ಸಿನ್ ಅಥವಾ ಔಷಧಿಗಳನ್ನು ಕಂಡು ಹಿಡಿಯಲು ಸಾಧ್ಯವಾಗಿಲ್ಲ. ಇದಕ್ಕೆ ಮುಂಜಾಗ್ರತೆಯ ಔಷಧವಾಗಿದ್ದು, ಆದ್ದರಿಂದ ಮಾಹಿತಿ ಶಿಕ್ಷಣದ ಮೂಲಕ ಸಮುದಾಯದ ಪ್ರತಿಯೊಬ್ಬರಿಗೂ ಅರಿವು ಮೂಡಿಸಿ ಏಡ್ಸ್‌ನ್ನು ತಡೆಗಟ್ಟಬಹುದಾಗಿದೆ. ಪ್ರತಿ ದಿನವೂ ಇದರ ಬಗ್ಗೆ ಜಾಗೃತಿ ಮೂಡಿಸಬೇಕು. ಹಾಗಾಗಿ ಈ ಬಾರಿಯ ಘೋಷವಾಕ್ಯ "ಸಮುದಾಯಗಳು ಮುನ್ನಡೆಸಲಿ" ಎಂಬುದಾಗಿದ್ದು, ಸಮುದಾಯವು ಇದರಲ್ಲಿ ಭಾಗಿಯಾಗಬೇಕು. ಎಚ್‌ಐವಿ-ಏಡ್ಸ್ ವೈರಸ್ ಎಂಬುವುದು ಕ್ಷಣ-ಕ್ಷಣಕ್ಕೂ ಬದಲಾವಣೆ ಆಗುವುದರಿಂದ, ಇದರ ಅಧ್ಯಯನ ನಡೆಸಿ, ಇದಕ್ಕೆ ಔಷಧಿ ತಯಾರಿಸಲು ಸಾಧ್ಯವಾಗುತ್ತಿಲ್ಲ. ಹಾಗಾಗಿ ಭಾರತ ದೇಶದ ಎಲ್ಲಾ ಪ್ರಜೆಗಳು ಎಚ್‌ಐವಿ-ಏಡ್ಸ್ ಬಗ್ಗೆ ತಿಳಿದುಕೊಂಡು ಮುಂಜಾಗ್ರತಾ ವಹಿಸುವ ಮೂಲಕ ತಡೆಗಟ್ಟಬೇಕು.

ಎಚ್‌ಐವಿ-ಏಡ್ಸ್‌ನಲ್ಲಿ ವಿಶ್ವದಲ್ಲಿ ಭಾರತ ಮೂರನೇ ಸ್ಥಾನದಲ್ಲಿ ಇದೆ. ಭಾರತದಲ್ಲಿ ಸುಮಾರು 25 ಲಕ್ಷ ಎಚ್‌ಐವಿ ಸೋಂಕಿತರು ಇದ್ದಾರೆ. ಕರ್ನಾಟಕದಲ್ಲಿ 7 ಲಕ್ಷ ಸೋಂಕಿತರಿದ್ದಾರೆ. ಚಿತ್ರದುರ್ಗ ಜಿಲ್ಲೆಯಲ್ಲಿ ಇದುವರೆಗೂ 8517 ಎಚ್‌ಐವಿ ಸೋಂಕಿತರನ್ನು ಪತ್ತೆ ಹಚ್ಚಲಾಗಿದೆ ಎಂದು ತಿಳಿಸಿದರು. ಕಾರ್ಯಕ್ರಮದಲ್ಲಿ ಜ್ಞಾನಗಂಗೋತ್ರಿ ಸ್ನಾತಕೋತ್ತರ ಕೇಂದ್ರದ ನಿರ್ದೇಶಕ ಡಾ.ಎಂ.ವಿ. ಲೋಕೇಶ್, ಚಿತ್ರದುರ್ಗ ವೈದ್ಯಕೀಯ ಮಹಾ ವಿದ್ಯಾಲಯ ಮತ್ತು ಸಂಶೋಧನಾ ಸಂಸ್ಥೆ ವಿಶೇಷಾಧಿಕಾರಿ ಡಾ.ಬಿ.ವೈ ಯುವರಾಜ್,ಸ್ನಾತಕೋತ್ತರ ಕೇಂದ್ರದ ರಾಷ್ಟ್ರೀಯ ಸೇವಾ ಯೋಜನೆ ಕಾರ್ಯಕ್ರಮಾಧಿಕಾರಿ ಡಾ.ಡಿ. ಶಶಿಧರ, ಗುಡ್ಡದರಂಗವ್ವನಹಳ್ಳಿ ಪ್ರಾಥಮಿಕ ಆರೋಗ್ಯ ಕೇಂದ್ರದ ಆಡಳಿತ ವೈದ್ಯಾಧಿಕಾರಿ ಡಾ.ಡಿ.ಗೀತಾಂಜಲಿ, ಎಆರ್‌ಟಿ ಕೇಂದ್ರದ ವೈದ್ಯಾಧಿಕಾರಿ ಡಾ.ರೂಪಶ್ರೀ, ಸ್ತ್ರೀರೋಗ ತಜ್ಞೆ ಉಮಾ ನಂಜುಂಡಪ್ಪ ಸೇರಿದಂತೆ ಸ್ನಾತಕೋತ್ತರ ಕೇಂದ್ರದ ಪ್ರಾಧ್ಯಾಪಕರು, ಸರ್ಕಾರಿ ವೈದ್ಯಕೀಯ ಕಾಲೇಜಿನ ವಿದ್ಯಾರ್ಥಿಗಳು, ಸ್ನಾತಕೋತ್ತರ ವಿದ್ಯಾರ್ಥಿಗಳು ಇದ್ದರು.

### ಉಚಿತ ನೇತ್ರ ತಪಾಸಣಾ ಶಿಬಿರ

# ಗ್ರಾಮೀಣ ಭಾಗದ ಜನರು ಸದುಪಯೋಗಪಡಿಸಿಕೊಳ್ಳಿ



» ಚಳ್ಳಕೆರೆ

ಕಣ್ಣು, ಹೃದಯ ಸೇರಿದಂತೆ ಹಲವಾರು ವಿಚಾರದಲ್ಲಿ ಆರೋಗ್ಯ ತಪಾಸಣೆ ಗ್ರಾಮೀಣ ಜನರಿಗೆ ಕಷ್ಟವಾದ ಸಂದರ್ಭದಲ್ಲಿ ಇಲ್ಲಿನ ಪ್ರಕಾಶ್ ಸ್ಪಾಂಜ್ ಐರನ್ ಅಂಡ್ ಪವರ್ ಪ್ರೈವೇಟ್ ಲಿಮಿಟೆಡ್ ಕಂಪನಿ ಉಚಿತ ಕಣ್ಣಿನ ಶಿಬಿರ ಹಮ್ಮಿಕೊಂಡು ಜನರಿಗೆ ನೆರವಾಗುತ್ತಿದೆ ಎಂದು ಸಾಣಿಕೆರೆ ಗ್ರಾಮ ಪಂಚಾಯಿತಿ ಅಧ್ಯಕ್ಷ ನಾಗರಾಜು ಸಂತೋಷ ವ್ಯಕ್ತಪಡಿಸಿದರು.

ಅವರು, ಗ್ರಾಮ ಪಂಚಾಯಿತಿ ವ್ಯಾಪ್ತಿಯ ಕಾಪರಹಳ್ಳಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲಾ ಆವರಣದಲ್ಲಿ ಉಚಿತ ಕಣ್ಣಿನ ಶಿಬಿರವನ್ನು ಗಿಡಕ್ಕೆ ನೀರು ಎರೆಯುವ ಮೂಲಕ ಚಾಲನೆ ನೀಡಿ ಮಾತನಾಡಿದರು. ಕಳೆದ ಹಲವಾರು ವರ್ಷಗಳಿಂದ ಈ ಖಾಸಗಿ ಕಂಪನಿ ಆಡಳಿತ ಮಂಡಳಿ ನಮ್ಮ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಸುತ್ತಮುತ್ತಲ ಗ್ರಾಮದ ಜನರಿಗೆ ಆರೋಗ್ಯ ತಪಾಸಣೆ ಜೊತೆಗೆ, ವಿದ್ಯಾರ್ಥಿಗಳಿಗೂ ನೆರವು ನೀಡುತ್ತಿರುವುದು ಉತ್ತಮ ಬೆಳವಣಿಗೆ ಎಂದರು.

ಕಂಪನಿಯ ಪ್ರಧಾನ ವ್ಯವಸ್ಥಾಪಕ ಎಸ್.ಕೆ.ರಾಜೇಂದ್ರಕುಮಾರ್ ಮಾತನಾಡಿ, ಗ್ರಾಮೀಣ ಭಾಗದ ಜನರ ಆರೋಗ್ಯ ಸುಧಾರಣೆಗೆ ನಮ್ಮ ಕಂಪನಿ ಸದಾ ಒತ್ತು ನೀಡುತ್ತಾ ಬಂದಿದೆ. ಕನ್ನಡ ರಾಜ್ಯೋತ್ಸವದ ಸುವರ್ಣ ಮಹೋತ್ಸವದ ಅಂಗವಾಗಿ ಉಚಿತ ಕಣ್ಣಿನ ತಪಾಸಣಾ ಶಿಬಿರ ನಡೆಸಿ ವೈದ್ಯರ ಸಲಹೆ ಮೇರೆಗೆ ಎಲ್ಲರಿಗೂ ಉಚಿತವಾಗಿ ಕನ್ನಡಕಗಳನ್ನು ವಿತರಣೆ ಮಾಡಲಾಗುತ್ತಿದೆ. ಗ್ರಾಮೀಣ ಭಾಗದ ಜನರು ಇಂತಹ ಉಚಿತ ಆರೋಗ್ಯ ಶಿಬಿರಗಳಲ್ಲಿ ಹೆಚ್ಚು ಭಾಗವಹಿಸಿ ತಮ್ಮ ಆರೋಗ್ಯ ಸುಧಾರಣೆಗೆ ಮುಂದಾಗಬೇಕು ಎಂದರು.

ಗ್ರಾಮ ಪಂಚಾಯಿತಿ ಉಪಾಧ್ಯಕ್ಷೆ ಶಶಿಕಲಾ, ಸದಸ್ಯರಾದ ಶ್ರುತಿ, ಸಿದ್ದಮ್ಮ, ಲಿಂಗರಾಜು, ನೂತನ್, ಲಿಂಗಪ್ಪ, ತಿಪ್ಪೇರುದ್ರಪ್ಪ, ಮುಖ್ಯ ಶಿಕ್ಷಕ ನಾಗರಾಜು, ಪಿಡಿಒ ದೇವರಾಜು, ಕಂಪನಿ ಉಪಪ್ರಧಾನ ವ್ಯವಸ್ಥಾಪಕ ರುದ್ರಪ್ಪ, ಸಿಎಸ್‌ಆರ್ ಮುಖ್ಯಸ್ಥ ಕೆ.ಎಸ್.ಮಂಜುನಾಥ, ವ್ಯವಸ್ಥಾಪಕ ಬಿ.ಕೆ.ನಾಗರಾಜನಾಯ್ಕ ಮುಂತಾದವರು ಉಪಸ್ಥಿತರಿದ್ದರು. ಗ್ರಾಮ ಪಂಚಾಯಿತಿ ಅಧ್ಯಕ್ಷ ನಾಗರಾಜು ಉದ್ಘಾಟಿಸಿದರು.

ಪುರಸಭಾ ಕಾರ್ಯಾಲಯ, ಹೊಸದುರ್ಗ-577527
ಜಿಲ್ಲೆ : ಚಿತ್ರದುರ್ಗ

E - Mail: tmchosdurga@yahoo.com ದೂರವಾಣಿ:- (08199) 230221
Website: www.hosadurgatown.gov.in ಜನಹಿತ:- 080-23108108
ನಂ.ಪುಸಹೊ/ಆ.ಶಾ/ಸಿಆರ್-95 /2023-24 ದಿನಾಂಕ: 01-12-2023

**ಬಹಿರಂಗ ಹರಾಜು ಪ್ರಕಟಣೆ**

ಹೊಸದುರ್ಗ ಪುರಸಭೆಗೆ ಸಂಬಂಧಿಸಿದಂತೆ ಘನತ್ಯಜ್ಯ ವಿಲೇವಾರಿ ಘಟಕದಲ್ಲಿ ದಿನಾಂಕ: 01-10-2023 ರಿಂದ 30-11-2023 ರವರೆಗೆ ಸಂಗ್ರಹವಾದ ತ್ಯಾಜ್ಯವನ್ನು ವಿಂಗಡಿಸಿ ಪುನರ್ ಬಳಕೆ ಮಾಡುವಂತಹ ವಸ್ತುಗಳನ್ನು ಬಹಿರಂಗ ಹರಾಜು ಪ್ರಕ್ರಿಯೆ ಮೂಲಕ ವಿಲೇಮಾಡಲಾಗುತ್ತಿದ್ದು. ಆಸಕ್ತ ಗುಜರಿ ವ್ಯಾಪಾರಸ್ಥರು/ಚಿಂದಿ ಆಯುವವರು/ರೈತರು/ ಆಸಕ್ತ ಇತರೇ ವ್ಯಾಪಾರಸ್ಥರು ರೂ.250/-ಗಳನ್ನು ಮುಖ್ಯಾಧಿಕಾರಿ ಪುರಸಭೆ, ಹೊಸದುರ್ಗ ರವರ ಹೆಸರಿಗೆ ಡಿ.ಡಿ ಮೂಲಕ ಸಂದಾಯ ಮಾಡಿ, ಡಿ.ಡಿ ಪ್ರತಿಯನ್ನು ದಿನಾಂಕ:08-12-2023ರ ಸಂಜೆ 4:00 ಗಂಟೆಯೊಳಗಾಗಿ ಕಛೇರಿಗೆ ಸಲ್ಲಿಸಿ ದಿನಾಂಕ:08-12-2023ರ ಸಂಜೆ 4:30 ಗಂಟೆಗೆ ಘನತ್ಯಾಜ್ಯ ವಿಲೇವಾರಿ ಘಟಕದಲ್ಲಿ ನಡೆಯುವ ಬಹಿರಂಗ ಹರಾಜು ಪ್ರಕ್ರಿಯೆಯಲ್ಲಿ ಭಾಗವಹಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಕಛೇರಿ ವೇಳೆ ಪುರಸಭೆ ಆರೋಗ್ಯ ಶಾಖೆಯಲ್ಲಿ ಸಂಪರ್ಕಿಸಬಹುದಾಗಿದೆವಿವರ:- (1) ಘನತ್ಯಾಜ್ಯದಿಂದ ವಿಂಗಡಿಸಿದ ಹಸಿ ತ್ಯಾಜ್ಯ (SEGGREGATED WET WASTE) ಗೊಬ್ಬರ COMPOST (2) ಘನತ್ಯಾಜ್ಯದಿಂದ ವಿಂಗಡಿಸಿದ ಒಣ ತ್ಯಾಜ್ಯ (SEGGREGATED DRY WASTE) (3) ದಿನಾಂಕ: 01-10-2023 ರಿಂದ 30-11-2023 ರವೆರೆಗೆ ಘನತ್ಯಾಜ್ಯದ ಒಣ ಕಸದಿಂದ ಸಂಗ್ರಹವಾದ ಪುನರ್ ಬಳಕೆ ಮಾಡುವಂತಹ ಹಳೆ ಕಬ್ಬಿಣ, ಪ್ಲಾಸ್ಟಿಕ್ ಬಾಟಲ್, ರೊಟ್ಟು, ಗಾಜು, ರಬ್ಬರ್, ತೆಂಗಿನ ಕಾಯಿ ಚಿಪ್ಪು, ಕವುಟು ಹಾಗೂ ಇತರೇ ವಸ್ತುಗಳು.

ಸಹಿ/-
ಮುಖ್ಯಾಧಿಕಾರಿ
ಪುರಸಭೆ,ಹೊಸದುರ್ಗ

## ಪ್ರಮುಖ ಸುದ್ದಿ

### ಮುಂದುವರೆದ ಅತಿಥಿ ಉಪನ್ಯಾಸಕರ ಪ್ರತಿಭಟನೆ

# ಬೇಡಿಕೆ ಈಡೇರಿಸಲು ಸಿಎಂಗೆ ಮನವಿ

» ಚಳ್ಳಕೆರೆ

ರಾಜ್ಯ ಅತಿಥಿ ಉಪನ್ಯಾಸಕ ಸಂಘದ ನಿರ್ದೇಶನದಂತೆ ನಗರದ ಎಚ್‌ಪಿಪಿಸಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿಗಳಲ್ಲಿ ಕಳೆದ ಹಲವಾರು ವರ್ಷಗಳಿಂದ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸುತ್ತಿರುವ ಸುಮಾರು 60ಕ್ಕೂ ಹೆಚ್ಚು ಅತಿಥಿ ಉಪನ್ಯಾಸಕರು ಸೇವಾ ಭದ್ರತೆಯೂ ಸೇರಿದಂತೆ ಹಲವಾರು ಬೇಡಿಕೆ ಈಡೇರಿಸುವಂತೆ ಒತ್ತಾಯಿಸಿ ತಹಶೀಲ್ದಾರ್ ಮೂಲಕ ಮುಖ್ಯಮಂತ್ರಿಗಳಿಗೆ ಮನವಿ ಅರ್ಪಿಸಿದರು.



ಈ ಸಂದರ್ಭದಲ್ಲಿ ಮಾತನಾಡಿದ ತಾಲ್ಲೂಕು ಅತಿಥಿ ಉಪನ್ಯಾಸಕರ ಸಂಘದ ಅಧ್ಯಕ್ಷ ಜೆ.ಬಸವರಾಜು, ಕಾಲೇಜಿನಲ್ಲಿ ವಿದ್ಯಾರ್ಥಿಗಳಿಗೆ ಉತ್ತಮ ಬೋಧನೆ ನೀಡುವ ಮೂಲಕ ಅತಿಥಿ ಉಪನ್ಯಾಸಕರು ತಮ್ಮ ಕರ್ತವ್ಯವನ್ನು ಪ್ರಾಮಾಣಿಕವಾಗಿ ಮಾಡುತ್ತಿದ್ದಾರೆ. ಹಲವಾರು ಬಾರಿ ಬೇಡಿಕೆಗಳ ಈಡೇರಿಕೆಗಾಗಿ ಪ್ರತಿಭಟನೆ ನಡೆಸಿದ ಸಂದರ್ಭದಲ್ಲಿ ಸರ್ಕಾರ ಸುಳ್ಳು ಭರವಸೆ ನೀಡಿ ನಮ್ಮ ಮುಷ್ಕರವನ್ನು ಹತ್ತಿಕ್ಕುವ ಪ್ರಯತ್ನ ಮಾಡುತ್ತಿದೆ. ಬಹುತೇಕ ಅತಿಥಿ ಉಪನ್ಯಾಸಕರು ಈಗಾಗಲೇ ತಮ್ಮ ವಯೋಮಿತಿ ಮೀರುವ ಆತಂಕದಲ್ಲಿದ್ದಾರೆ. ಸರ್ಕಾರ ಈಗಲಾದರೂ ನಮ್ಮ ಬೇಡಿಕೆ ಈಡೇರಿಕೆಗೆ ಗಮನಹರಿಸಬೇಕೆಂದು ಒತ್ತಾಯಿಸಿದರು.

ತಹಶೀಲ್ದಾರ್ ಪರವಾಗಿ ಮನವಿ ಸ್ವೀಕರಿಸಿದ ಶಿರಸ್ತೇದಾರ್ ಸದಾಶಿವಪ್ಪ, ತಾವು ತಮ್ಮ ಬೇಡಿಕೆಗಳ ಈಡೇರಿಕೆಗೆ ಒತ್ತಾಯಿಸಿ ಮಾನ್ಯ ಮುಖ್ಯಮಂತ್ರಿಗಳಿಗೆ ನೀಡಿದ ಮನವಿಯನ್ನು ಜಿಲ್ಲಾಧಿಕಾರಿಗಳ ಮೂಲಕ ಸರ್ಕಾರಕ್ಕೆ ಕಳಿಸುವ ಭರವಸೆ ನೀಡಿದರು. ಮನವಿ ಅರ್ಪಣೆ ಸಂದರ್ಭದಲ್ಲಿ ತಾಲ್ಲೂಕು ಸಂಘದ ಉಪಾಧ್ಯಕ್ಷೆ ಶಿಲ್ಪ, ಓ.ಶ್ರೀನಿವಾಸ್, ಯರ್ರಿಸ್ವಾಮಿ, ಡಿ.ಟಿ.ಸುರೇಶ್, ಮಹಮ್ಮದ್‌ವಲಿವುಲ್ಲಾ, ಮಾರುತಿ, ಸಿ.ಎ.ಬಸವರಾಜು, ಮಧು, ಬ್ರಹ್ಮನಂದರೆಡ್ಡಿ, ಶೋಭಾ, ಸುಪ್ರೀತ, ಬಸವರಾಜುಕೋಲ್ಕರ್, ಮುಂತಾದವರು ಉಪಸ್ಥಿತರಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T